

# ಸಿಹಿ ಕಹಿ

ಕನ್ನಡ ದಿನಪತ್ರಿಕೆ, ಬಾಗಲಕೋಟೆ

ಬಾಗಲಕೋಟೆಯಿಂದ ಪ್ರಕಟಿತ

SK NEWS ಕನ್ನಡ

SIHI KAHI

KANNADA DAILY MORNING BAGALKOT

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ

Editor : MARUTI BASAVANTAPPA HOSAMANI

Cell : +91 9741319119

RNI REG No. : KARKAN/2016/75068

Volume : 08 Issue : 40 Saturday 18-10-2025 E-mail : maruti.b.hosamani76@gmail.com Page: 4 Price : Rs. 1/-


## ರಾಜ್ಯ ಹಿಂದುಳಿದ ವರ್ಗಗಳ ಆಯೋಗ ನಡೆಸುತ್ತಿರುವ ಸಮಗ್ರ ಮಾಹಿತಿ ಸಂಗ್ರಹಿಸುವ, ಸಮೀಕ್ಷೆದಾರರಿಗೆ ಪೂರ್ಣ ಗೊಳಿಸಲು ಶ್ರಮಿಸಿರಿ ಎಂದು ಟಿ.ಪಿ ಇ.ಓ ರಾಮುಜಿ. ಅಗ್ನಿ ಸೂಚಿಸಿದರು





**ಸಿಹಿ ಕಹಿ ಸುದ್ದಿ,**

**ಆಲಮೇಲ :** ರಾಜ್ಯ ಹಿಂದುಳಿದ ವರ್ಗಗಳ ಆಯೋಗನಡೆಸುತ್ತಿರುವ ಜನರ ಸಾಮಾಜಿಕ ಮತ್ತು ಶೈಕ್ಷಣಿಕ ಹಿನ್ನೆಲೆಗಳ ಬಗ್ಗೆ ಸಮಗ್ರ ಮಾಹಿತಿ ಸಂಗ್ರಹಿಸುವ ಗುರಿಯನ್ನು ಹೊಂದಲಾಗಿದೆ ಎಲ್ಲರೂ ಸೇರಿ ಸಮೀಕ್ಷೆ ಪೂರ್ಣ ಗೊಳಿಸಲು ಶ್ರಮಿಸಬೇಕು ಎಂದು ಸಿಂದಗಿ ತಾಲೂಕು ಪಂಚಾಯತ ಕಾರ್ಯ ನಿರ್ವಾಹಕ ಅಧಿಕಾರಿ ರಾಮುಜಿ ಅಗ್ನಿ ಸೂಚಿಸಿದರು.

ಆಲಮೇಲ ತಾಲೂಕಿನ ದೇವಣಗಾಂವ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ದೇವಣಗಾಂವ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಗ್ರಾಮಗಳ ಗಣತಿದಾರ ಶಿಕ್ಷಕರ ಪ್ರಗತಿ ಪರಿಶೀಲನೆ ಮಾಡಿ ಮಾತನಾಡಿದರು.

ಇನ್ನೂ ಮೂರು ದಿನಗಳಲ್ಲಿ ಗಣತಿಯನ್ನು ಪೂರ್ಣ ಗೊಳಿಸ ಬೇಕಿದೆ, ಸಮೀಕ್ಷೆ ಪೂರ್ಣ ಗೊಳಿಸಲು ಆಗುತ್ತಿರುವ ಅಡೆ ತಡೆಗಳು ಯಾವುವು ಅವುಗಳನ್ನು ಯಾವ ರೀತಿಯಲ್ಲಿ ಬಗೆಹರಿಸಿ ಕೊಳ್ಳಬೇಕೆಬುದನ್ನು ಇದೇ ಸಂದರ್ಭದಲ್ಲಿ ವಿವರಿಸಿದರು.

ತಾಂತ್ರಿಕ ಅಡೆ ತಡೆಗಳಿರುವ ಸಮೀಕ್ಷೆಯನ್ನು ಪಂಚನಾಮಿ ಮಾಡುವ ಮೂಲಕ ಇತ್ಯರ್ಥ ಪಡಿಸಿ ಕೊಳ್ಳಬೇಕೆಂದು ಸೂಚಿಸಿದರು.

ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರನ್ನು ಸಮೀಕ್ಷೆ ಪೂರ್ಣ ಗೊಳಿಸುವ ಉದ್ದೇಶದಿಂದ ಅವರನ್ನು ಬಳಸಿ ಕೊಂಡು ಶೇ.100 ಗುರಿಯನ್ನು ಸಾಧಿಸಿ ಎಂದು ಹೇಳಿದರು.

ದೇವಣಗಾಂವ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ಸಂಜೀವಕುಮಾರ ದೊಡಮನಿ ಮಾತನಾಡಿ ಸಮೀಕ್ಷೆದಾರರಿಗೆ ಎಲ್ಲ ರೀತಿಯ ಸಹಾಯ ಸೌಕರ್ಯಗಳನ್ನು ಗ್ರಾಮ ಪಂಚಾಯಿತಿ ಯಿಂದ ಮಾಡಿ ಕೊಡಲಾಗಿದೆ ಹಾಗೂ ಡಂಗುರ ಸಾರುವ ಮೂಲಕ ಮತ್ತಷ್ಟು ಜನರಿಗೆ ಸಮೀಕ್ಷೆಯ ಬಗ್ಗೆ ಅರಿವು ಮೂಡಿಸಲಾಗುವುದು ಎಂದು ವಿವರಿಸಿದರು. ಸಿ.ಆರ್.ಪಿ ಎಸ್.ಆರ್. ಮುಲ್ಲಾ ಮಾತನಾಡಿ ಸಮೀಕ್ಷೆದಾರರಿಗೆ ಆಗುತ್ತಿರುವ ತಾಂತ್ರಿಕ ಅಡೆ ತಡೆಗಳನ್ನು, ತೊಂದರೆಗಳನ್ನು ಸಭೆಯಲ್ಲಿ ವಿವರಿಸಿದರು.

ಆಲಮೇಲ ತಾಲೂಕು ಪಂಚಾಯತ ಎ.ಡಿ ಸಿದ್ದು ಅಂಕಲಗಿ, ಶಿಕ್ಷಕರಾದ ಗುರುಲಿಂಗಪ್ಪ ಸಿಂಪಿ, ಎಸ್.ಎಸ್ ಕರ್ನಾಳ, ಎಸ್.ವಿ ಪಾಟೀಲ, ಲಕ್ಷ್ಮಿಪುತ್ರ ಹಾಳಕಿ, ಜಿ.ಆರ್ ಹಿರೇಮಠ, ಚಂದು ಪೂಜಾರಿ, ಎಸ್.ಎ ಹರವಾಳ, ಎಂ.ಎಂ ಕಲಶೆಟ್ಟಿ, ಎ.ಎ ಸಿಂದಗಿಕರ, ಚಾಂದಸಾಬ ಅಡಾಡಿ, ಭಗವಂತ ಅತಾಪಿ ಖಾಜೆಸಾಬ ಚೌದರಿ, ಎಂ.ಎ ಜೋಶಿ, ಎಸ್.ಎಸ್ ಸಾಲೋಟಗಿ, ಎಂ.ಎಸ್ ಜೋಗುರ, ಆಯ್.ಕೆ ಪತ್ತಾರ, ಎಂ.ಆರ್ ನಾಗಾವಿ, ಶಾಂತಾಬಾಯಿ ಹಿಂಚಿಗೇರಿ, ಗಂಗಾಬಾಯಿ ಬಾನಾಳ, ಕವಿತಾ ಬೋಗಾರ, ಸಂಗೀತ ರಜಪೂತ ಉಪಸ್ಥಿತರಿದ್ದರು.

**ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ರೇವಣಸಿದ್ದಯ್ಯ.ಜಿ.ಹಿರೇಮಠ. ಆಲಮೇಲ**

## ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಯವರ ಮೇಲೆ ಶ್ಯೂ ಎಸೆದ ವ್ಯಕ್ತಿಯನ್ನು ಗಡಿಪಾರು ಮಾಡಬೇಕು – ತರೀಕೆರೆ.ಎನ್ ವೆಂಕಟೇಶ್



**ಸಿಹಿ ಕಹಿ ಸುದ್ದಿ,**

**ತರೀಕೆರೆ:** ಬಾಬಾ ಸಾಹೇಬ್ ಡಾ.ಬಿ.ಆರ್ ಅಂಬೇಡ್ಕರ್ ರವರು ನೀಡಿದ ಸಂವಿಧಾನ ದಂತೆ ನಮ್ಮ ದೇಶದಲ್ಲಿ ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗಗಳು ಸರ್ವ ಶ್ರೇಷ್ಠವಾದವು ಎಂದು ಮಹಾತ್ಮ ಪ್ರೊ, ಬಿ.ಕೃಷ್ಣಪ್ಪ ಸ್ಥಾಪಿತ ಕರ್ನಾಟಕ ದಲಿತ ಸಂಘರ್ಷ ಸಮಿತಿಯ ರಾಜ್ಯ ಸಂಚಾಲಕರಾದ ತರೀಕೆರೆ.ಎನ್ ವೆಂಕಟೇಶ್ ರವರು ಇಂದು ಪಟ್ಟಣದ ತಾಲೂಕು ಆಡಳಿತ ಸೌದದಲ್ಲಿ ತಹಶೀಲ್ದಾರ್ ವಿಶ್ವಜಿತ್ ಮಹತ ರವರ ಮುಖಾಂತರ ರಾಷ್ಟ್ರಪತಿಗಳಿಗೆ ಮನವಿ ಪತ್ರ ಸಲ್ಲಿಸಿ ಪತ್ರಿಕಾ ಪ್ರತಿನಿಧಿಗಳೊಂದಿಗೆ ಮಾತನಾಡಿದರು. ಸರ್ವೋಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಸಿ.ಜೆ.ಐ ಬಿ.ಆರ್ ಗವಾಯಿ ರವರು ನ್ಯಾಯಾಲಯದಲ್ಲಿ ಕಲಾಪಗಳನ್ನು ನಡೆಸುತ್ತಿರುವಾಗ ರಾಕೇಶ್ ಕಿಶೋರ್ ಎಂಬ ವಕೀಲನು ಇವರ ಮೇಲೆ ಶ್ಯೂ ಎಸೆದಿರುವುದು ಕಾನೂನು ಬಾಹಿರ ಚಟುವಟಿಕೆ ಆಗಿರುತ್ತದೆ, ನ್ಯಾಯಾಲಯಕ್ಕೆ ಅಗೌರವ, ಅಪಮಾನ ಮಾಡಿರುವುದು ಈ ದೇಶದ ಪ್ರತಿಯೊಬ್ಬ ನಾಗರಿಕನು ತಲೆ ತಗ್ಗಿಸುವಂತಹ ಘಟನೆ ಯಾಗಿದೆ. ಆದ್ದರಿಂದ ಈತನ ಮೇಲೆ ಕಾನೂನು ಬಾಹಿರ ಚಟುವಟಿಕೆಗಳ ತಡೆ ಕಾಯ್ದೆಯಡಿ ಕೇಸು ದಾಖಲಿಸಿ ಮತ್ತು ಈತ ಈ ಕೃತ್ಯ ವ್ಯಸಗಿರುವ ದೇಶದ್ರೋಹಿ ಕೆಲಸವಾಗಿರುತ್ತದೆ ಆದ್ದರಿಂದ ದೇಶ ದ್ರೋಹಿ ಎಂದು ಪರಿಗಣಿಸಿ ಪ್ರಕರಣ ದಾಖಲಿಸ ಬೇಕು.

ನ್ಯಾಯಾಂಗ ವ್ಯವಸ್ಥೆಗೆ ನ್ಯಾಯಾಧೀಶರಿಗೆ ಸೂಕ್ತ ರಕ್ಷಣೆ ಒದಗಿಸಬೇಕು. ವಿಕೃತ ಮನಸ್ಸಿನ ಕೋಮುವಾದಿ ವಕೀಲನನ್ನು ಗಡಿಪಾರು ಮಾಡಬೇಕು ಎಂದು ಮಹಾತ್ಮ ಪ್ರೊ, ಬಿ.ಕೃಷ್ಣಪ್ಪ ಸ್ಥಾಪಿತ ಕರ್ನಾಟಕ ದಲಿತ ಸಂಘರ್ಷ ಸಮಿತಿಯ ರಾಜ್ಯ ಸಂಚಾಲಕರಾದ ತರೀಕೆರೆ.ಎನ್ ವೆಂಕಟೇಶ್ ನೇತೃತ್ವದ ಸಂಘಟನೆ ರಾಜ್ಯದಾದ್ಯಂತ ಪ್ರತಿಭಟನೆ ಮೂಲಕ ರಾಷ್ಟ್ರಪತಿಗಳಿಗೆ ಮನವಿ ನೀಡುತ್ತಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ತಾಲೂಕು ಸಂಚಾಲಕರಾದ ಎನ್.ಹೆಚ್ ಬಸವರಾಜ್, ಜಿಲ್ಲಾ ಸಂಘಟನಾ ಸಂಚಾಲಕರಾದ ರಾಘವೇಂದ್ರ, ಪ್ರದೀಪ್ ಕುಮಾರ್, ತಾಲೂಕು ಸಂಘಟನಾ ಸಂಚಾಲಕರಾದ ಅಣ್ಣಪ್ಪ ತಾಲೂಕು ಖಜಾಂಚಿ ನಾಗರಾಜ್ ಹಾಗೂ ಜಿಲ್ಲಾ ಮುಖಂಡರಾದ ರಾಜೇಗೌಡರವರು ಉಪಸಿತರಿದ್ದರು.

**ಜಿಲ್ಲಾ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಎನ್. ವೆಂಕಟೇಶ್ ತರೀಕೆರೆ ಚಿಕ್ಕಮಗಳೂರು**

## ರೋಟರಿ ಅಡಿಯಲ್ಲಿ ಉಚಿತ ಕಣ್ಣು ತಪಾಸಣೆ ಶಿಬಿರ: ಹೆರಕಲ್

**ಜಮಖಂಡಿ :** ರೋಟರಿ ಸಂಸ್ಥೆಯ ಅಡಿಯಲ್ಲಿ ಬಾಗಲಕೋಟೆಯ ಡಾ. ಮಾಸೂರಕರ ಅವರ ಕಣ್ಣಿನ ಆಸ್ಪತ್ರೆಯ ಆಶ್ರಯದಲ್ಲಿ ಬಡವರಿಗೆ ಉಚಿತವಾಗಿ ಕಣ್ಣು ತಪಾಸಣೆ ಶಿಬಿರ ಆಯೋಜಿಸಲಾಗುವುದು. ಶೇ. 50 ರ ರಿಯಾಯಿತಿ ದರದಲ್ಲಿ ಕನ್ನಡಕ ವಿತರಿಸಲಾಗುವುದು. ರೋಟರಿ ಸಂಸ್ಥೆ ಸೂಚಿಸುವ ಕಡೆ ಶಿಬಿರವನ್ನು ಆಯೋಜಿಸಲಾಗುವುದು ಎಂದು ರೋಟರಿ ಜಿಲ್ಲೆ 3170 ರ ಸಹಾಯಕ ಗವ್ಹರ್ನರ ನಾರಾಯಣ ಹೆರಕಲ್ ಹೇಳಿದರು.




ಇಲ್ಲಿನ ವಿಜಯಪುರ ರಸ್ತೆಯ ಹೊರ ವಲಯದಲ್ಲಿರುವ ರೋಟರಿ ಭವನದಲ್ಲಿ ರೋಟರಿ ಸಂಸ್ಥೆಯ ಆಶ್ರಯದಲ್ಲಿ ಶುಕ್ರವಾರ ಸಂಜೆ ನಡೆದ ವಾರದ ಸಭೆಯ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು.

ಪಲ್ಸ್ ಪೋಲಿಯೋ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು. ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಕುರಿತು ವಿಶೇಷ ಉಪನ್ಯಾಸ ವ್ಯವಸ್ಥೆ ಮಾಡಬೇಕು. ಮಳೆ ನೀರು ಕೊಯ್ಲು, ಚೆಕ್ ಡ್ಯಾಂ ನಿರ್ಮಾಣದ ಮಹತ್ವ ಕುರಿತು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು.

ಶಿಕ್ಷಕರಿಗೆ ತರಬೇತಿ ಕಾರ್ಯಾಗಾರ, ಶಾಲಾ–ಕಾಲೇಜು ಮಕ್ಕಳಿಗೆ ಗಣ–ಕಯಂತ್ರ ಮತ್ತು ಸೈಕಲ್ ವಿತರಿಸುವಂತಹ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲು ಸಲಹೆ ನೀಡಿದರು.

ರೋಟರಿ ಜಿಲ್ಲೆ ಗವ್ಹರ್ನರ ಆಗುವಂತ ಅರ್ಹತೆಯುಳ್ಳ ವ್ಯಕ್ತಿಗಳನ್ನು ಗುರುತಿಸಿ ರೋಟರಿಸದಸ್ಯರನ್ನಾಗಿಮಾಡಿಕೊಳ್ಳಬೇಕು. ಮುಂಬರುವ ದಿನಗಳಲ್ಲಿ ಹೊಸ ಮತ್ತು ವಿನೂತನವಾದ ಯೋಜನೆಗಳನ್ನುರೂಪಿಸಿ ಅನುಷ್ಠಾನಗೊಳಿಸಬೇಕು ಎಂದು ಸಲಹೆ ನೀಡಿದರು.

ಜಮಖಂಡಿ ರೋಟರಿ ಸಂಸ್ಥೆಯ ಅಧ್ಯಕ್ಷ ರಾಜಶೇಖರ ಕೋವಳ್ಳಿ ಅಧ್ಯಕ್ಷತೆ ವಹಿಸಿ ಮಾತನಾಡಿ, ರೋಟರಿ ಸಂಸ್ಥೆ ನಿರ್ಮಿಸುತ್ತಿರುವ ಅಡುಗೆ ಕೋಣೆಯ ಉದ್ಘಾಟನೆಗೆರೋಟರಿಗವ್ಹರ್ನರಅವರನ್ನು ಆಹ್ವಾನಿಸಲು ಹಾಗೂ ರೋಟರಿ ಜಿಲ್ಲಾ ಮಟ್ಟದ ಕಾರ್ಯಕ್ರಮಗಳನ್ನು ಜಮಖಂ–ಡಿಗೆ ವಹಿಸಿ ಕೊಡಲು ಸಹಾಯಕ ಗವ್ಹರ್ನರ ಅವರಲ್ಲಿ ಮನವಿ ಮಾಡಿದರು.

ರೋಟರಿ ಸಂಸ್ಥೆಯ ಖಜಾಂಚಿ ಶಂಕರ ತೇಲಿ ರೋಟರಿ ಸಂಸ್ಥೆಯ ಫೋರ್ ವೇ ಟೆಸ್ಟ್ ಓದಿದರು.

ಕಾರ್ಯದರ್ಶಿ ಎಂ. ಎಚ್. ಕಡ್ಲಿಮಟ್ಟಿ ವಂದಿಸಿದರು.

## ಬಸ್ ನಿಲುಗಡೆಗೆ ಆಗ್ರಹಿಸಿ ರಸ್ತೆ ತಡೆದು ಪ್ರತಿಭಟನೆ



**ಜಮಖಂಡಿ :** ತಾಲೂಕಿನ ಆಲಗೂರು ಗ್ರಾಮದ ವಿದ್ಯಾರ್ಥಿಗಳು ಬಸ್ ನಿಲುಗಡೆಗೆ ಆಗ್ರಹಿಸಿ ರಸ್ತೆ ತಡೆದು ಪ್ರತಿಭಟನೆ ನಡೆಸಿದರು. ಬೆಳಗಾವಿ–ವಿಜಯಪುರ ರಾಜ್ಯ ಹೆದ್ದಾರಿ ಸ್ಥಗಿತಗೊಳಿಸಿ ಪ್ರತಿಭಟನೆ ನಡೆಸುವ ಮೂಲಕ ಆಲಗೂರ ಗ್ರಾಮದ ಮುಖಾಂತರ ಹೋಗುವ ಎಲ್ಲ ಬಸ್ಸುಗಳನ್ನು ನಿಲ್ಲಿಸಬೇಕು ಎಂದು ಆಗ್ರಹಿಸಿದರು.

ಜಮಖಂಡಿ ಘಟಕಕ್ಕೆ ಸೇರಿದ ಬಸ್ ಮಾತ್ರ ಆಲಗೂ–ರಿಗೆ ನಿಲ್ಲುತ್ತಿದ್ದು, ಉಳಿದೆಲ್ಲ ಘಟಕಗಳ ಬಸ್ ಗಳನ್ನು ನಿಲ್ಲಿಸುತ್ತಿಲ್ಲ. ಇದರಿಂದ ಶಾಲೆ–ಕಾಲೇಜುಗಳಿಗೆ ಹೋಗಲು ತೊಂದರೆಯಾಗುತ್ತಿದೆ. ಇಂದಿನಿಂದಲೇ ಎಲ್ಲ ಬಸಗಳನ್ನು ನಿಲ್ಲಿಸಲು ಸಂಬಂಧಪಟ್ಟ ಅಧಿಕಾ–ರಿಗಳು ಸೂಚನೆ ನೀಡಬೇಕೆಂದು ಆಗ್ರಹಿಸಿದರು.

ವಿದ್ಯಾರ್ಥಿಗಳ ಪ್ರತಿಭಟನೆಗೆ ನೂರಾರು ಗ್ರಾಮಸ್ಥರು ಬೆಂಬಲ ನೀಡಿದರು.

ಒಂದು ಗಂಟೆಗೂ ಹೆಚ್ಚುಕಾಲ ರಸ್ತೆ ತಡೆಯಲಾಗಿ–ತ್ತು. ಇದರಿಂದ ಸಾರ್ವಜನಿಕರ ಸಂಚಾರಕ್ಕೆ ತೊಂದರೆ ಉಂಟಾಯಿತು. ಜಮಖಂಡಿ ಹಾಗೂ ವಿಜಯಪುರದ ಬಸ್ಸುಗಳು, ವಾಹನಗಳು ಕಿಲೊಮೀಟರ್ ಗಟ್ಟಲೇ ನಿಂತು ಕೊಂಡಿದ್ದವು.


ಘಟಕ ವ್ಯವಸ್ಥಾಪಕ ಎಸ್. ಬಿ. ಗಸ್ತಿ ಮತ್ತು ಪೊಲೀಸ್ ಇಲಾಖೆಯ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪ್ರತಿಭಟನಾ ನಿರತ ವಿದ್ಯಾರ್ಥಿಗಳ ಮನವೊಲಿಸಿ ರಸ್ತೆ ತೆರವುಗೊಳಿಸಿದರು.

ಎಲ್ಲ ಬಸಗಳನ್ನು ನಿಲ್ಲಿಸಲು ಕ್ರಮ ಜರುಗಿಸುವುದಾಗಿ ಅಧಿಕಾರಿಗಳು ಭರವಸೆ ನೀಡಿದರು.

## ರೈಲು ಮಾರ್ಗಗಳನ್ನು ಪುನಃ ಪ್ರಾರಂಭಿಸುವಂತೆ – ಕೇಂದ್ರ ಹಣಕಾಸು ಸಚಿವರಿಗೆ ಮನವಿ

**ಸಿಹಿ ಕಹಿ ಸುದ್ದಿ,**

**ಮಾನ್ವಿ :** ರಾಯಚೂರು ಜಿಲ್ಲೆಗೆ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದಕ್ಕೆ ಆಗಮಿಸಿದ ಕೇಂದ್ರ ಹಣಕಾಸು ಸಚಿವರಾದ ನಿರ್ಮಲಾ ಸೀತಾರಾಮನ್ ರವರಿಗೆ ಸಿಂಧನೂರು ಪಟ್ಟಣದ ಸರ್ಕಿಟ್ ಹೌಸ್ನಲ್ಲಿ ಮಾನ್ವಿ ತಾಲೂಕಿನ ವಿವಿಧ ಬೇಡಿಕೆಗಳನ್ನು ಈಡೆರಿಸುವಂತೆ ಮಾನ್ವಿ ಮಂಡಲ ಬಿ.ಜೆ.ಪಿ. ಪಕ್ಷದ ನಿಯೋಗದೊಂದಿಗೆ ತೆರಳಿ ಬಿ.ಜೆ.ಪಿ ಮಾನ್ವಿ ಮಂಡಲ ಮಾಜಿ ಅಧ್ಯಕ್ಷರಾದ ಜೆ. ಸುಧಾಕರ್ ಮನವಿ ಸಲ್ಲಿಸಿ ಮಾತನಾಡಿ ಆಂಧ್ರ ಪ್ರದೇಶದ ಪೂರ್ವ ಗೋದಾವರಿ, ಪಶ್ಚಿಮ ಗೋದಾವರಿ ಮತ್ತು ಕೃಷ್ಣ ಜಿಲ್ಲೆಗಳಿಂದ ಸುಮಾರು 5 ಲಕ್ಷ ಜನರು ಕಳೆದ 60 ವರ್ಷಗಳಿಂದ ರಾಯಚೂರು ಜಿಲ್ಲೆಯ ಸಿಂಧನೂರು, ಮಾನ್ವಿ, ಮಸ್ಕಿ, ಲಿಂಗಸುಗೂರು, ದೇವದುರ್ಗ ಮತ್ತು ರಾಯಚೂರು ತಾಲೂಕುಗಳಲ್ಲಿ ಹಾಗೂ ಯಾದಗಿರಿ ಜಿಲ್ಲೆಯ ಯಾದಗಿರಿ, ಶೋರಾಪುರ ಮತ್ತು



ಶಹಾಪುರ ತಾಲೂಕುಗಳು, ಕೊಪ್ಪಳ ಜಿಲ್ಲೆಯ ಕಾರಟಗಿ, ಗಂಗಾವತಿ ತಾಲೂಕುಗಳಲ್ಲಿ ನೆಲೆಸಿ ಕೃಷಿ, ಕೈಗಾರಿಕೆ ಮತ್ತು ವ್ಯಾಪಾರ ಕ್ಷೇತ್ರಗಳಲ್ಲಿ ತಮ್ಮನು ತೊಡಗಿಸಿ ಕೊಂಡಿದ್ದಾರೆ ಆದ–ರೆ ಇವರು ತಮ್ಮ ಸಂಬಂಧಿಗಳ ಮನೆಗಳಲ್ಲಿ ನಡೆಯುವ ಶುಭ ಸಮಾರಂಭಗಳಿಗೆಹೋಗುವುದಕ್ಕೆ ಹಾಗೂ ತಮ್ಮ ಕುಟುಂಬದ ಉಳಿದ ಸದಸ್ಯರನ್ನು ಭೇಟಿ ಮಾಡುವುದಕ್ಕೆ 8 ನೂರು ಕಿ.ಮಿ ದೂರ ಇರುವ ಆಂಧ್ರ ಪ್ರದೇಶದ ವಿವಿಧ ಪಟ್ಟಣಗಳಿಗೆ ನಿರಂತರವಾಗಿ ಹೋಗ ಬೇಕಾಗುತ್ತದೆ ಹಾಗೂ

**ಸಿಂಧನೂರು ಪಟ್ಟಣದಲ್ಲಿ ಬಿಜೆಪಿ ಮಾನ್ವಿ ಮಂಡಲ ವತಿಯಿಂದ ಕೇಂದ್ರ ಹಣಕಾಸು ಸಚಿವರಾದ ನಿರ್ಮಲಾ ಸೀತಾರಾಮನ್ ರವರಿಗೆ ಮನವಿ ಸಲ್ಲಿಸಲಾಯಿತು.**

ಅಲ್ಲಿನ ಜನರು ಇಲ್ಲಿಗೆ ಬರುವುದಕ್ಕೆ ಆನುಕೂಲವಾಗಿದ್ದ ರಾಜ್ಯದ ರಾಯಚೂರು ನಗರದಿಂದ ಆಂಧ್ರ ಪ್ರದೇಶದ ಕಾಕಿನಾಡ ನಡುವೆ ಸಂಚರಿಸುವ 07246 ಸಂ–ಖ್ಯೆಯ ರೈಲು ಕೆಲವು ತಿಂಗಳಿಂದ ಸಂಚಾರ ನಡೆಸುತ್ತಿಲ್ಲ ಅದ್ದರಿಂದ ರೈಲು ಸಂಖ್ಯೆ 07246 & 07245 ಅನ್ನು ಮಂತ್ರಾಲಯದಿಂದ ಪುನರಾರಂಭಿಸಬೇಕು. ಆಂಧ್ರ ಪ್ರದೇಶದ ಮಂತ್ರಾಲಯ ರೈಲು ನಿಲ್ದಾಣದಿಂದ ಮಚಲಿ ಪಟ್ಟಣಕ್ಕೆ ಸಂಚರಿಸುತ್ತಿದ್ದ 07067 ಸಂ–ಖ್ಯೆಯ ರೈಲು ಮತ್ತು ಪ್ರತಿಯಾಗಿ 07068 ಸಂಖ್ಯೆಯ ರೈಲು ಸಹ ಕೆಲವು ದಿನಗಳಿಂದ ಸಂಚಾರ ಸ್ಥಗಿತ ಗೊಂಡಿದೆ ಮಹೇಬೂಬ್ ನಗರದಿಂದ ವಿಶಾಖ ಪಟ್ಟಣ–ಕ್ಕೆ 12862 ಮತ್ತು 12861 ಸಂ–ಖ್ಯೆಯ ರೈಲು ಇದ್ದು, ಈ ರೈಲನ್ನು ರಾಯಚೂರು ರೈಲು ನಿಲ್ದಾಣದ ವರೆಗೆ ರೈಲು ಸಂಚಾರವನ್ನು ವಿಸ್ತರಿಸಿದಲ್ಲಿ ಈ ಭಾಗದ ಪ್ರವಾಸಾಂಧ್ರ ನಿವಾಸಿಗಳಿಗೆ ವೃದ್ದರಿಗೆ, ಮಹಿಳೆಯರಿಗೆ, ಮಕ್ಕಳಿಗೆ ಸಂಚರಿಸುವುದಕ್ಕೆ ಅನುಕೂಲವಾಗುತ್ತದೆ ಅದ್ದರಿಂದ ಸಾರ್ವಜನಿಕ ಹಿತಾಸಕ್ತಿಗಾಗಿ ಕೇಂದ್ರ ರೈಲ್ವೆ ಸಚಿವ ಶ್ರೀ ಅಶ್ವಿನಿ ವೈಷ್ಣವ್ ಜಿ ಅವರೊಂದಿಗೆ ನಮ್ಮ ಬೇಡಿಕೆಗಳ ಕುರಿತು ಚರ್ಚೆ ನಡೆಸಿ ಅನುಕೂಲ ಮಾಡಿ ಕೊಡುವಂತೆ ಮನವಿ ಮಾಡಿ ಕೊಂಡರು.

ಮಾನ್ವಿ ಬಿ.ಜೆ.ಪಿ ಮಂಡಲ ಉಪಾಧ್ಯಕ್ಷರಾದ ವಿಶ್ವನಾಥ ಬಿ ನಂದಿಹಾಳ್, ತಾ. ಮಹಾ ಶಕ್ತಿ ಕೇಂದ್ರದ ಅಧ್ಯಕ್ಷರಾದ ಕುಮಾರಸ್ವಾಮಿ ಮೇದಾ, ಕಿಸಾನ್ ಮೋರ್ಚಾ ಜಿಲ್ಲಾ ಕಾರ್ಯದರ್ಶಿ ಶಿವಲಿಂಗಯ್ಯ ಸ್ವಾಮಿ, ಕಿಸಾನ್ ಮೋರ್ಚಾ ತಾ. ಕಾರ್ಯದರ್ಶಿ ಜಿ.ಉಮಾಪತಿ ನಾಯಕ್, ಮುಖಂಡರಾದ ಗೋಪಾಲ ಇಭ್ರಮಪುರ ಸೇರಿದಂತೆ ಇನ್ನಿತರರು ಇದ್ದರು.

**ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಹುಸೇನ್.ಭಾಷಾ. ನಕ್ಕುಂದಿ.ಮಾನ್ವಿ**

## ಶರಣರ ದೃಷ್ಟಿಯಲ್ಲಿ ಮಾತು ಜ್ಯೋತಿರ್ಲಿಂಗ

**ಬಾದಾಮಿ :** ಮಾತು ಮಾಣಿಕ್ಯದಂತಿರಬೇಕು. ಮಾತು ಮಂತ್ರದಂತಿರಬೇಕು. ಶರಣರ ಮಾತುಗಳನ್ನು ಮನವಿಟ್ಟು ಕೇಳಬೇಕು. ಮಾತುಗಳನ್ನು ಗಮನವಿಟ್ಟು ಕೇಳಿಸಿಕೊಳ್ಳುವುದು ಒಂದು ತಪಸ್ಸು ಎಂದು ಮುಗಳಖೋಡದ ಸಿದ್ಧಾರೂಢ ಭಾರತಿ ಆಶ್ರಮದ ಶರಣಬಸವ ಶಾಸ್ತ್ರಿಗಳು ಅಭಿಪ್ರಾಯ ಪಟ್ಟರು. ಅವರು ಬಾದಾಮಿ ತಾಲೂಕಿನ ಸುಕ್ಷೇತ್ರ ಜಾಲಿಹಾಳ ಗ್ರಾಮದ ಲೋಕಮಾತಾ ಮಂದಿರದಲ್ಲಿ ನಡೆದ "ನವರಾತ್ರಿ ಸಂಭ್ರಮ –2025"ರ ಕಾರ್ಯಕ್ರಮದಲ್ಲಿ ಹನ್ನೊಂದು ದಿನಗಳ ಕಾಲ ಶ್ರೀ ದೇವಿ ಪುರಾಣವನ್ನು ನಡೆಸಿ ಸಮಾರೋಪದಲ್ಲಿ ಮಾತನಾಡುತ್ತಾ ಕ್ಷುಲ್ಲಕ ಮಾತುಗಳಿಗೆ ಕಿವಿ ಕಿವಿಗೊಡದೆ ಆದರ್ಶದ ನುಡಿಗಳನ್ನು ಕೇಳಿಸಿಕೊಳ್ಳಬೇಕು. ಶರಣರ, ಸಂತರ, ಮಹಾತ್ಮರ ಮಾತುಗಳನ್ನು ಯಾವತ್ತೂ ಮೆಲುಕು ಹಾಕುತ್ತಿರಬೇಕು. ಅನುಷ್ಠಾನಕ್ಕೂತರುವಂತಾಗಬೇಕು. ಅಂದಾಗ ಮಾನವನ ಬದುಕು ಸಾರ್ಥಕವಾಗುತ್ತದೆ. ಶರಣರ ದೃಷ್ಟಿಯಲ್ಲಿ ಮಾತುಗಳು ಜ್ಯೋತಿರ್ಲಿಂಗ ಎಂದರು. ಮುಂದುವರೆದು ಮಾತನಾಡುತ್ತಾ, ಶರೀರ ಮಾಧ್ಯಂ ಖಲು ಧಮ9 ಸಾಧನಂ. ಎಲ್ಲ ಸಾಧನೆಗಳಿಗೆ ಈ ಶರೀರವೇ ಮುಖ್ಯ. ಈ ಮಾನವ ಶರೀರ ಭಗವಂತ ನೀಡಿದ ಅದ್ಭುತ ಕಾಣಿಕೆ ಎಂದರು. ಸಮಾಜ ಸೇವಾ ಧುರೀಣ ಅಜೀಜ್ ಮುಲ್ಲಾ ಪ್ರಾಸ್ತಾವಿಕವಾಗಿ ಮಾತನಾಡಿದರು. ಮುತ್ತಪ್ಪ ಮಾಧವನವರ ಹಾಗೂ ರಾಜಕುಮಾರ್ ಮಾಧವನವರ ಸಂಚಾಲಕರಾಗಿ ಕಾರ್ಯ ನಿರ್ವಹಿಸಿದರು. ಪ್ರಭು ಬಡಿಗೇರ, ಪರಸಪ್ಪ ಹಿರೇಹೊಳಿ, ಈಶ್ವರಪ್ಪಗೋಡಿ, ಬಸವರಾಜ ಚಂದ್ರಗಿರಿ, ಅಚ9ಕರಾದ ಕೃಷ್ಣಪ್ಪ ಬಡಿಗೇರ, ಬಾಬು ಮಹಾರಾಜರು, ಜಯಪ್ಪ ಕಳ್ಳಿ ಮುಂತಾದವರು ಉಪಸ್ಥಿತರಿದ್ದರು. ಖ್ಯಾತ ಸಂಗೀತಗಾರ ಶಿರಗೂರದ ನಾಗಯ್ಯ ಸ್ವಾಮಿ ಹಿರೇಮಠ ಅವರಿಂದ ಸಂಗೀತ ಸೇವೆ ನಡೆಯಿತು. ಹಿಪ್ಪರಗಿಯ ಸಂಗಣ್ಣ ಪೂಜಾರಿ ತಬಲಾ ಸಾಥ್ ನೀಡಿದರು.

ಈ ಸಂದರ್ಭದಲ್ಲಿ ತನು ಮನ ಧನ ಸೇವೆ ಸಲ್ಲಿಸಿದ ಸಾಧಕರನ್ನು ಗೌರವಿಸಲಾಯಿತು. ಮಹಾಮಂಗಲ ಮಹಾಪ್ರಸಾದದೊಂದಿಗೆ ಕಾರ್ಯಕ್ರಮ ಸಮಾರೋಪಗೊಂಡಿತು.

## ಗ್ರಾಮೀಣ ಮಹಿಳೆಯರಲ್ಲಿ ಎಲ್‌ಪಿಜಿ ಬಳಕೆ ಹಾಗೂ ಉಳಿಕೆಯ ಮಾಹಿತಿ ಶಿಬಿರ



**ರಬಕವಿ–ಬನಹಟ್ಟಿ :** ಸಮೀಪದ ಆಸಂಗಿ ಗ್ರಾಮ ಪಂಚಾಯತ್ ಕಾರ್ಯಾಲಯದ ಹತ್ತಿರ ಮಲ್ಲಿಕಾರ್ಜುನ ದೇವಸ್ಥಾನದಲ್ಲಿ ಗ್ರಾಮೀಣ ಮಹಿಳೆಯರಲ್ಲಿ ಗ್ಯಾಸ ಸುರಕ್ಷಿತ ಬಳಕೆ ಹಾಗೂ ಹೆಚ್ಚು ಉಳಿತಾಯದ ಮಾಹಿತಿ ಕಾರ್ಯಕ್ರಮ ಜರುಗಿತು. ಈ ಶಿಬಿರದಲ್ಲಿ ಮಹಿಳೆಯರಿಗೆ ಕಟ್ಟಿಗೆ ಒಲೆಯಿಂದ ಅವರ ಆರೋಗ್ಯದಲ್ಲಿ ಆಗುವ ದುಷ್ಪರಿಣಾಮಗಳ ಕುರಿತು ಆಶಾ ಕಾರ್ಯಕರ್ತೆ ಶ್ರೀಮತಿ ಗಾಯತ್ರಿ ರಾವಳ ಚೆನ್ನಾಗಿ ವಿವರಿಸಿದರು. ಅಂಗನವಾಡಿ ಕಾರ್ಯಕರ್ತೆ ಶೋಭಾ ಹಿರೇಮಠ ಗ್ಯಾಸ ಉಪಯೋಗಿಸಿ ಅಡುಗೆ ಮಾಡುವುದರಿಂದ ನಮ್ಮ ಆರೋಗ್ಯ ಮತ್ತು ಸಮಯ ಹೇಗೆ ಉಳಿಸಿ ಕೊಳ್ಳಬಹುದೆಂಬ ಕುರಿತು ಸಲಹೆ ನೀಡಿದರು.

ರಬಕವಿ ಭಾರತ ಗ್ಯಾಸ ವ್ಯವಸ್ಥಾಪಕರಾದ ಸಂಗಮೇಶ ಗುಣಕಿ ಕೆಲವು ಸುರಕ್ಷತಾ ಪ್ರಾತ್ಯಕ್ಷಿಕೆ ಬಗ್ಗೆ ಮಾಹಿತಿ ನೀಡಿದರು.

ಸುಮಾರು 120 ಜನ ಮಹಿಳೆಯರು ಭಾಗವಹಿಸಿದ್ದರು. ಭಾರತ ಗ್ಯಾಸ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

## ಮುಟ್ಟಿನ ರಜೆಗೆ ಅಸ್ತು



ನಮ್ಮ ಕಾಲೇಜಿನಲ್ಲಿ ಪ್ರತಿದಿನವೂ ಒಬ್ಬ ಹುಡುಗಿಯಾದರೂ ಮುಟ್ಟಿನ ಹೊಟ್ಟೆ ನೋವಿನಿಂದ ಒದ್ದಾಡುತ್ತಾಳೆ. ಮತ್ತೊಬ್ಬಳು ಮೇಡಂ ಮನೆಗೆ ಹೋಗಬಹುದಾ ಅಂತ ಕೇಳಲು ಬರುತ್ತಾಳೆ. ಅವಳಿಗೆ ನಾನೆನ್ನುತ್ತೇನೆ; ನೀವಾದರೆ ನಮ್ಮನ್ನು ಕೇಳಿಕೊಂಡು ಹೋಗಬಹುದು ಮಾರಾಯ್ತಿ; ನಾವು ಯಾರನ್ನು ಕೇಳಿ ಹೋಗೋದು ? ಮೂರ್ನಾಲ್ಕು ಗಂಟೆ ನಿಂತು ಪಾಠ ಮಾಡಬೇಕಲ್ಲ ಅನ್ನುತ್ತ ನಗುತ್ತೇನೆ. ಮುಟ್ಟಿನ ಎರಡನೇ ದಿನವಂತೂ ಹೆಣ್ಣುಮಕ್ಕಳ ಪರಿಸ್ಥಿತಿ ಬಲು ಕರುಣಾಜನಕ ಎಂಬುದು ಎಲ್ಲ–ರಿಗೂ ಗೊತ್ತಿದೆ. ಇನ್ನು ಹೊಟ್ಟೆ ನೋವು, ಬೆನ್ನು ನೋವಿನಿಂದ ಮಾತ್ರೆ ತೆಗೆದುಕೊಳ್ಳದೇ ಹೆಜ್ಜೆಯನ್ನೂ ಎತ್ತಿಡಲಾಗದ ನಮ್ಮಂತಹ ಬಹುತೇಕ ಹೆಣ್ಣುಮಕ್ಕಳ ಪರಿಸ್ಥಿತಿ ಕೇಳುವುದೇ ಬೇಡ. ಇದೀಗ ಮಹಿಳಾ ಉದ್ಯೋಗಿಗಳಿಗೆ'ವೇತನಸಹಿತಮುಟ್ಟಿನರಜೆಗೆ'ರಾಜ್ಯ ಸಚಿವ ಸಂಪುಟ ಅನುಮೋದನೆ ನೀಡಿದೆ. ಈ ಮುಟ್ಟಿನ ರಜೆಯನ್ನು ಸಂಪುಟ ಅಂಗೀಕರಿಸಿರುವುದು ನಿಜಕ್ಕೂ ಒಂದು ಒಳ್ಳೆಯ ನಿರ್ಧಾರ. ಸರ್ಕಾರಿ, ಖಾಸಗಿ ಎಲ್ಲ ಕಡೆ ಈ ರಜೆ ಅನ್ವಯವಾಗುವುದು ಮತ್ತೂ ಉತ್ತಮ ಸಂಗತಿ. (ಈ ರಜೆಯ ಸ್ವರೂಪ ಗೊತ್ತಾಗಿಲ್ಲ; ಒಂದು ದಿನ ಅಂತೇನೋ ಓದಿದೆ. ಅಷ್ಟಾದರೂ ಸಾಕು ಸುಧಾರಿಸಿಕೊಳ್ಳಲು, ವಿಶ್ರಾಂತಿ ಪಡೆಯಲು) ಧನ್ಯವಾದಗಳು ಸಾಧ್ಯವಾಗಿಸಿದ ಎಲ್ಲರಿಗೂ. ಹೆಣ್ಣು ಮಕ್ಕಳಿಗೆ ಹೆರಿಗೆ ರಜೆ ಬೇಕೆಂದು ಪ್ರತಿಪಾದಿಸಿ ಅದನ್ನು ಸಾಧ್ಯವಾಗಿಸಿದ ಬಾಬಾ ಸಾಹೇಬ್ ಅಂಬೇಡ್ಕರ್ ಅವರನ್ನು ನಾವು ಈ ಸಂದರ್ಭದಲ್ಲಿ ನೆನೆಸಿಕೊಳ್ಳಬೇಕಲ್ಲವೇ ? ಹೆಣ್ಣುಮಕ್ಕಳ ಬಗ್ಗೆ ಮಾತೃ ಹೃದಯದಿಂದ ಯೋಚಿಸುವವರ ಸಂಖ್ಯೆ ಸಾವಿರ ಸಾವಿರವಾಗಲಿ.

**। ದೀಪಾ ಹಿರೇಗುತ್ತಿ.**

## ಮಾನಸಿಕ ಆರೋಗ್ಯ ಮತ್ತು ಸೌಲಭ್ಯಗಳ ಅರಿವು ಮೂಡಿಸಿ: ನ್ಯಾಯಾಧೀಶ ಅರವಿಂದ ಹಾಗರಗಿ

**ವರದಿ:ಲಾಲಸಾಬ ಸವಾರಗೋಳ**

**ವಿಜಯಪುರ :** ಮಾನಸಿಕ ಆರೋಗ್ಯದ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವುದ ಅತ್ಯವಶ್ಯಕವಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹಿರಿಯ ಸಿವ್ಹಿಲ್ ನ್ಯಾಯಾಧೀಶ ಅರವಿಂದ ಹಾಗರಗಿ ಅವರು ಹೇಳಿದರು.



ಜಿಲ್ಲಾ ಆಡಳಿತ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಘಟಕ ವಿಜಯಪುರ ಹಾಗೂ ವಿವಿದ ನರ್ಸಿಂಗ್ ಕಾಲೇಜು ಹಾಗೂ ಮನೋಜ್ಯೋತಿ ಫೌಂಡೇಶನ್ ವಿಜಯಪುರ ಇವರ ಸಂಂ–ಯುಕ್ತ ಆಶ್ರಯದಲ್ಲಿ ಶುಕ್ರವಾರ ಹಮ್ಮಿಕೊಂಡ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆಯ ಜನಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಪದ್ಮಶ್ರೀ ಪ್ರಶಸ್ತಿ ವಿಜೇತರರು ಹಾಗೂ ಹಿರಿಯ ಮನೋರೋಗ ತಜ್ಞ ಡಾ॥ ಸಿ.ಆರ್. ಚಂದ್ರಶೇಖರ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ॥ ಸಂಪತ್ತ ಗುಣಾರಿ ಅವರೊಂದಿಗೆ ಜಂಟಿಯಾಗಿ ಹಸಿರು ನಿಶಾನೆ ತೋ–ರಿಸುವ ಮೂಲಕ ಚಾಲನೆ ನೀಡಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದಲ್ಲಿ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಾನಸಿಕ ಕಾಯಿಲೆಯು ಪುರಾತನ ಕಾಲದಿಂದ ಮನುಷ್ಯನನ್ನು ಕಾಡುತ್ತಾ ಬಂದಿದೆ ಇದಕ್ಕೆ ಸರಳವಾದ ಚಿಕಿತ್ಸೆ ಇರಲಿಲ್ಲ ಈಗ ಆ ಕಾಲ ಬದಲಾಗಿದೆ. ರಾಷ್ಟ್ರೀಯ ಮಾನಸಿಕ ಆರೋಗ್ಯ ಕಾರ್ಯಕ್ರಮ ಬಂದ ನಂತರ ಸಮುದಾಯಕ್ಕೆ ಆರೋಗ್ಯದ ಅರಿವು ಮತ್ತು ಜ್ಞಾನವನ್ನು ಕೊಡಲಾಗುತ್ತಿದ್ದು, ಅಲ್ಲದೇ ಮಾನಸಿಕ ಖಾಯಿಲೆಗಳಿಗೆ ಉಚಿತ ಚಿಕಿತ್ಸೆ ಹಾಗೂ ಆಪ್ತಸಮಾಲೋಚನೆ ಮೂಲಕ ಮಾನಸಿಕ ಸಮಸ್ಯೆಗಳಿಗೆ ಪರಿಹಾರ ನೀಡಲಾಗುತ್ತಿದೆ. ಸಾರ್ವಜನಿಕರು ಇದರ ಸೌಲಭ್ಯಗಳನ್ನು ಪಡೆದುಕೊಂಡು ತಮ್ಮ ಜೀವನ ಶೈಲಿಯ ಬದಲಾವಣೆಯಿಂದ ಮಾನಸಿಕವಾಗಿ ಆರೋಗ್ಯವಂತರಾಬೇಕು ಎಂದು ಅವರು ಹೇಳಿದರು. ಮಾನಸಿಕ ಆರೋಗ್ಯದ ಬಗೆಗೆ ಸಾರ್ವಜನಿಕರಲ್ಲಿ ಅರಿವುವನ್ನು ಮೂಡಿಸುವುದು ಬಹಳ ಅತ್ಯವಶ್ಯಕ ಎಂಬುದನ್ನು ಮನಗಂಡು 1948ರಲ್ಲಿ ವಿಶ್ವಮಾನಸಿಕಆರೋಗ್ಯಒಕ್ಕೂಟ ಸ್ಥಾಪನೆಯಾಯಿತು. 1992ರಲ್ಲಿ ಮೊದಲ ಬಾರಿಗೆ ಒಕ್ಕೂಟದ ವತಿಯಿಂದ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆಯನ್ನು ಆಚರಿಸಲಾಯಿತು ಎಂದು ಅವರು ಹೇಳಿದರು.

ಡಾ॥ ಸಿ.ಆರ್. ಚಂದ್ರಶೇಖರ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರು ಹಾಗೂ ಹಿರಿಯ ಮನೋರೋಗ ತಜ್ಞರು ಮಾತನಾಡುತ್ತಾ ದೈಹಿಕ ರೋಗಗಳನ್ನು ಗುಣಪಡಿಸಲು ಚಿಕಿತ್ಸೆ ನೀಡುವಂತೆ ಮಾನಸಿಕ ರೋಗಗಳನ್ನು ಚಿಕಿತ್ಸೆ ನೀಡಿ ಗುಣಪಡಿಸಬಹುದು ಇದಕ್ಕಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ವಿವಿಧ ಕೇಂದ್ರಗಳನ್ನು ಪ್ರಾರಂಭಿಸಿ ಚಿಕಿತ್ಸಾ ಸೌಲಭ್ಯಗಳನ್ನು ನೀಡುತ್ತಿದೆ. ಈ ಸೌಲಭ್ಯದ ಅರಿವು ರೋಗಿಗಳಿಗೆ ಮೂಡಿಸುವುದು ದಿನಾಚರಣೆಯ ಉದ್ದೇಶವಾಗಿದೆ ಎಂದು ಅವರು ಹೇಳಿದರು.

ಡಾ॥ಸಂಪತ್ತಗುಣಾರಿಜಿಲ್ಲಾಆರೋಗ್ಯಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ರವರು ರಾಜ್ಯ ಸರ್ಕಾರ 2014ರಲ್ಲಿ "ಮನೋಚೈತನ್ಯ ಕ್ಲಿನಿಕ" ಎಂಬ ಕಾರ್ಯಕ್ರಮವನ್ನು ಪ್ರಾರಂಭಿಸಿತ್ತು. ಈ ಕಾರ್ಯಕ್ರಮದಡಿಯಲ್ಲಿ ಪ್ರತಿ ಮಂಗಳವಾರ ತಾಲೂಕು ಆಸ್ಪತ್ರೆಗಳಲ್ಲಿ ಮಾನಸಿಕ ಆರೋಗ್ಯ ತಪಾಸಣೆ ಮತ್ತು ಆರೈಕೆ ಕುರಿತಾಗಿ ಶಿಬಿರಗಳನ್ನು ಆಯೋಜಿಸಲಾಗುತ್ತದೆ. ಗರ್ಭಿಣಿ ಮತ್ತು ಬಾಣಂತಿಯರ ಮಾನಸಿಕ ಸಮಸ್ಯೆಗಳನ್ನು ಗುರುತಿಸಿ ಅವರುಗಳಿಗೆ ಸೂಕ್ತ ಮಾನಸಿಕ ಚಿಕಿತ್ಸೆ ಮತ್ತು ಆಪ್ತ ಸಮಾಲೋಚನಾ ಸೇವಾ ಸೌಲಭ್ಯಗಳನ್ನು ಒದಗಿಸುವ ಉದ್ದೇಶವಾಗಿದೆ. ರಾಷ್ಟ್ರೀಯ ಟೆಲಿಮಾನಸಿಕ ಆರೋಗ್ಯ ಕಾರ್ಯಕ್ರಮವಾಗಿದ್ದು ಇದು ಮಾನಸಿಕ ಆರೋಗ್ಯ ಸೇವಾ ಸೌಲಭ್ಯವನ್ನು ಉಚಿತವಾಗಿ ದಿನದ 24 ಗಂಟೆಗಳು ಒದಗಿಸುವ ಮಾನಸಿಕ ಆರೋಗ್ಯ ಸಹಾಯವಾಣಿಯಾಗಿದೆ (ಸಹಾಯವಾಣಿ ಸಂಖ್ಯೆ:14416) ಪರೀಕ್ಷೆ ಒತ್ತಡ, ಮಾದಕ ಮತ್ತು ಮಧ್ಯವ್ಯಸನಿಗಳು, ಕೌಟುಂಬಿಕ ಸಮಸ್ಯೆ, ಖಿನ್ನತೆ ಮುಂತಾದ ಮಾನಸಿಕ ರೋಗಗಳಿಂದ ಬಳಲುವವರಿಗೆ ಮಾನಸಿಕ ಆರೋಗ್ಯ ವಿಷಯ ಪರಿಣಿತರು ಆಪ್ತಸಲಹೆ ಸೇವೆಯನ್ನು ಒದಗಿಸುವರು. ಮಾನಸಿಕ ರೋಗಿಗಳ ಗೌಪ್ಯತೆಯನ್ನು ಕಾಪಾಡಲಾಗುವುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮನೋರೋಗ ತಜ್ಞರಾದ ಡಾ॥ ಮಂಜುನಾಥ ಮಸಳಿ ಪ್ರಾಸ್ತಾವಿಕವಾಗಿ ಮಾತನಾಡಿ, ತಂಬಾಕು ಹಾಗೂ ದೂಮಪಾನ ಸೇವನೆಯಿಂದ ಮಾನಸಿಕ ಖಿನ್ನತೆಯಿಂದ ಹೆಚ್ಚು ಜನರು ಬಳಲುತ್ತಿದ್ದು. ಅದರಲ್ಲಿ ಮಹಿಳೆಯರು ಶೇ 3ರಷ್ಟುಮಾನಸಿಕರೋಗಕ್ಕೆತುತ್ತಾಗುತ್ತಿದ್ದಾರೆ. ಹಾಗೂ ವಿವಿದ ರೀತಿಯ ಮಾನಸಿಕ ರೋಗಗಳ ಕುರಿತು ಮತ್ತು ಅದರ ಚಿಕಿತ್ಸೆಯ ಬಗ್ಗೆ ಮಾತನಾಡಿದರು.

ಜಾಥಾ ಹಾಗೂ ವೇದಿಕೆ ಕಾರ್ಯಕ್ರಮದಲ್ಲಿ ಜಿಲ್ಲಾ ಕುಷ್ಠರೋಗ ನಿಮೂಲನಾ ಅಧಿಕಾರಿ ಡಾ॥ ಅರ್ಚನಾ ಕುಲಕರ್ಣಿ, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಪರಶುರಾಮ ಹಿಟ್ನಳ್ಳಿ, ಜಿಲ್ಲಾ ಮಲೇರಿಯಾ ಅಧಿಕಾರಿ ಡಾ.ಜಾನ್ ಕಟವಟೆ, ಮನೋರೋಗ ತಜ್ಞ ಡಾ.ಚೌಕಿಮಠ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಜಿ.ಎಂ.ಕೋಲೂರ, ಸುರೇಶ ಹೊಸಮನಿ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ರೇಖಾ ದಶವಂತ, ಕೆ.ಬಿ ಬಾಗವಾನ ಕ್ಲಿನಿಕ್ ಸೈಕಾಲೋಜಿಸ್ಟ್, ಆರೋಗ್ಯ ಇಲಾಖೆಯ ಸಿಬ್ಬಂದಿ ವರ್ಗದವರು, ವಿವಿಧ ನರ್ಸಿಂಗ ಕಾಲೇಜಿನ ಭೋದಕ ಸಿಬ್ಬಂದಿ ವರ್ಗದವರು ಮತ್ತು ವಿಧ್ಯಾರ್ಥಿ/ವಿಧ್ಯಾರ್ಥಿನಿಯರು ಹಾಗೂ ಆಶಾ ಕಾರ್ಯಕರ್ತೆಯರು ಉಪಸ್ಥಿತ–ರಿದ್ದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಎನ್.ಆರ್ ಭಾಗವಾನ ಸ್ವಾಗತಿಸಿದರು. ರವಿ ಕಿತ್ತೂರ ನಿರೂಪಿಸಿದರು.

## ಕಾನಿಪ ಜಿಲ್ಲಾ ಆಡಳಿತ ಮಂಡಳಿಗೆ ನ.9 ಚುನಾವಣೆ–ಸೋಮವಾರ ಅಧಿಸೂಚನೆ

**ಬಾಗಲಕೋಟೆ :** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಆಡಳಿತ ಮಂಡಳಿಗೆ (2025–28 ಅವಧಿಗೆ) ನವಂಬರ್ 9 ರಂದು ಚುನಾವಣೆ ನಡೆಯಲಿದೆ.

ಈ ಸಂಬಂಧ ಸೋಮವಾರ ಅ.13 ರಂದು ಅಧಿಸೂಚನೆ ಹೊರಡಲಿದ್ದು, ವೇಳಾಪಟ್ಟಿ ಪ್ರಕಟಗೊಳ್ಳಲಿದೆ. ಮತದಾರರ ಕರಡು ಪ್ರತಿ ಪ್ರಕಟಿಸಲಾಗುವುದು.

ಅಕ್ಟೋಬರ್ 19 ರಿಂದ ನಾಮಪತ್ರ ಸಲ್ಲಿಕೆ ಆರಂಭವಾಗಲಿದ್ದು, ಅ.27 ನಾಮಪತ್ರ ಸಲ್ಲಿಕೆಗೆ ಕೊನೆಯ ದಿನ. ಅ.28 ನಾಮಪತ್ರ ಪರಿಶೀಲನೆ, ಅ.30 ನಾಮಪತ್ರ ಹಿಂದಕ್ಕೆ ಪಡೆಯಲು ಕೊನೆಯ ದಿನವಾಗಿರುತ್ತದೆ.



ನ.9 ಭಾನುವಾರ ಬಾಗಲಕೋಟೆಯ ಪತ್ರಿಕಾ ಭವನದಲ್ಲಿ ಬೆಳಿಗ್ಗೆ 9 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ಮತದಾನ ನಡೆಯಲಿದೆ. ನಂತರ ಅಂದೇ ಮತ ಎಣಿಕೆ ನಡೆದು ಫಲಿತಾಂಶ ಪ್ರಕಟವಾಗಲಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಪ್ರಕಾಶ ಬಾಳಕ್ಕನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 'ಸಹಕಾರ ಸಂಘಗಳಿಗೆ ಮರಣ ಶಾಸನ'

**ಸಿಂಧನೂರು :** 'ರಾಜ್ಯ ಸರ್ಕಾರ ಸಹಕಾರಿ ಕಾಯ್ದೆಯನ್ನು ತಿದ್ದುಪಡಿ ಮಾಡಿರುವುದು ಸೌಹಾರ್ದ ಸಹಕಾರಿ ಸಂಘಗಳಿಗೆ ಮರಣ ಶಾಸನವಾಗಿದೆ' ಎಂದು ರಾಜ್ಯ ಸಂಯುಕ್ತ ಸಹಕಾರಿಯ ಮಾಜಿ ಅಧ್ಯಕ್ಷ ಗುರುನಾಥ ಜಾಂತೇಕರ್ ತೀವ್ರ ಕಳವಳ ವ್ಯಕ್ತಪಡಿಸಿದರು.



ಗರದ ಟೌನ್‌ಹಾಲ್‌ನಲ್ಲಿ ಕರ್ನಾಟಕ ಸೌಹಾರ್ದ ಸಹಕಾರಿ ಬೆಂಗಳೂರು ಪ್ರಾಂತೀಯ ಕಚೇರಿ ಕಲಬುರಗಿಅವರಜಂಟಿಆಶ್ರಯದಲ್ಲಿಸೌಹಾರ್ದ ಸಹಕಾರಿಗಳ ಅಧ್ಯಕ್ಷರು, ನಿರ್ದೇಶಕರು ಹಾಗೂ ಕಾರ್ಯನಿರ್ವಾಹಕರೊಂದಿಗೆ 2025ರ ಸಹಕಾರಿ ಕಾಯ್ದೆ ತಿದ್ದುಪಡಿಯ ಸಮಾಲೋಚನಾ ಸಭೆಯಲ್ಲಿ ಶುಕ್ರವಾರ ಅವರು ಮಾತನಾಡಿದರು.

ಸಹಕಾರಿ ಸಂಘಗಳ ನಿರ್ದೇಶಕರು ಆಸ್ತಿ ಘೋಷಣೆ ಮಾಡುವುದು, ಸೌಹಾರ್ದ ಸಹಕಾರಿಗಳ ಮೀಸಲು ನಿಧಿಯನ್ನು ಡಿಸಿಸಿ ಅಥವಾ ಅಪೆಕ್ಸ್ ಬ್ಯಾಂಕ್‌ನಲ್ಲಿ ಠೇವಣಿ ಇಡುವಂತೆ ಪ್ರಸ್ತಾಪಿಸಲಾಗಿದೆ. ಆದರೆ, ಈ ಬ್ಯಾಂಕ್‌ನಲ್ಲಿಠೇವಣಿ ಇಡುವುದು ಎಷ್ಟರಮಟ್ಟಿಗೆ ಸುರಕ್ಷಿತ ಎನ್ನುವುದರ ಬಗ್ಗೆ ಸರ್ಕಾರ ಗಮನಹರಿಸದಿರುವುದು ಶೋಚನೀಯ. ಪ್ರತಿ ಮೂರು ವರ್ಷಕ್ಕೊಮ್ಮೆ ಸಹಕಾರಿ ಸಂಘಗಳನ್ನು ಲೆಕ್ಕ ಪರಿಶೋಧನೆ ಇಲಾಖೆಯಿಂದ ಪರಿಶೋಧನೆ ಮಾಡುವ ಉದ್ದೇಶದ ಮೂಲಕ ಸರ್ಕಾರಿ ಅಧಿಕಾರಿಗಳಿಗೆ ಭ್ರಷ್ಟಾಚಾರಕ್ಕೆ ಅನುಕೂಲ ಮಾಡಿಕೊಟ್ಟಂತಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಮಾಜಿ ಸಂಸದ ಕೆ.ವಿರೂಪಾಕ್ಷಪ್ಪ ಮಾತನಾಡಿ, ಕಳೆದ 25 ವರ್ಷಗಳ ಹಿಂದೆ ಸಹಕಾರಿ ಸಂಘಗಳು ರಾಜಕಾರಣಿಗಳು ಮತ್ತು ಅಧಿಕಾರಿಗಳ ದುರುಪಯೋಗ ಕೃತ್ಯದಿಂದ ಸಹಕಾರಿ ಸಂಘಗಳಿಗೆ ಗಮನಾರ್ಹವಾದ ಹಿನ್ನಡೆಯಾಗಿತ್ತು. ಸೌಹಾರ್ದ ಕಾಯ್ದೆ ಜಾ–ರಿಯಾದ ನಂತರ ಸಹಕಾರಿ ಚಳವಳಿ ಪುನಶ್ಚೇತನಗೊಂಡಿತ್ತು. ಈಗ ಪುನಃ ಸರ್ಕಾರ ಹಿಂದಿನ ಸ್ಥಿತಿಗೆ ಕೊಂಡೊಯ್ಯಲು ಪ್ರಯತ್ನಿಸುತ್ತಿದೆ ಎಂದು ಅಪಾದಿಸಿದರು.

ನಿರ್ದೇಶಕ ಆರ್.ತಿಮ್ಮಯ್ಯ ಅಧ್ಯಕ್ಷತೆ ವಹಿಸಿದ್ದರು. ನಿರ್ದೇಶಕರಾದ ಎಚ್.ಜಿ. ಹನುಮಂತಯ್ಯಶೆಟ್ಟಿ, ಶ್ರೀಧರ ಕೆಸರಟ್ಟಿ, ಗಂಗಾವತಿ ಮಾಜಿ ಶಾಸಕ ಪರಣ್ಣ ಮುನವಳ್ಳಿ, ಮಸ್ಕಿ ಮಾಜಿ ಶಾಸಕ ಪ್ರತಾಪಗೌಡ ಪಾಟೀಲ, ಆರ್‌ಡಿಡಿಸಿಸಿ ಬ್ಯಾಂಕ್ ನಿರ್ದೇಶಕ ಸೋಮನಗೌಡ ಬಾದರ್ಲಿ, ಬಿ.ರಾಜಶೇಖರ, ಮಂಜುಳಾ ಪಾಟೀಲ ಮಾತನಾಡಿದರು.

ರಾಜ್ಯ ಸಂಯುಕ್ತ ಸಹಕಾರಿಯ ವ್ಯವಸ್ಥಾಪಕ ನಿರ್ದೇಶಕ ಶರಣಗೌಡ ಜಿ. ಪಾಟೀಲ ಪ್ರಾಸ್ತಾವಿಕ ಮಾತನಾಡಿದರು.

ಕಲಬುರಗಿ ಜಿಲ್ಲಾ ಒಕ್ಕೂಟದ ಅಧ್ಯಕ್ಷ ಎಸ್. ಎಸ್.ಪಾಟೀಲ್, ಕೊಪ್ಪಳ ಜಿಲ್ಲಾ ಅಧ್ಯಕ್ಷ ಕಡ್ಡಿಪುಡಿ ಚನ್ನಪ್ಪ, ರಾಯಚೂರು ಜಿಲ್ಲಾ ಒಕ್ಕೂಟದ ನಿರ್ದೇಶಕರು ಉಪಸ್ಥಿತರಿದ್ದರು.

ಪ್ರಾಂತೀಯ ವ್ಯವಸ್ಥಾಪಕ ಸೂರ್ಯಕಾಂತ ರಾಕ್ಲೆ, ಜಿಲ್ಲಾ ಅಭಿವೃದ್ಧಿ ಅಧಿಕಾರಿಗಳಾದ ನಟ–ರಾಜ, ಆಂಜನೇಯ, ರಾಯಚೂರು ಜಿಲ್ಲಾ ಒಕ್ಕೂಟದಪ್ರಭಾರಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಬಿ.ಹುಸೇನ್‌ಸಾಬ್ ನಿರೂಪಿಸಿದರು. ಕಲ್ಯಾಣ ಕರ್ನಾಟಕದ ಎಲ್ಲ ಜಿಲ್ಲೆಗಳ ಸೌಹಾರ್ದ ಸಹಕಾರಿ ಸಂಘಗಳ ಅಧ್ಯಕ್ಷರು, ಅಧಿಕಾರಿಗಳು ಭಾಗವಹಿಸಿದ್ದರು.

## ಶಾಸಕರ ಜನಸಂಪರ್ಕ ಸಭೆ: ಅನುದಾನ ಬಳಕೆಯ ಪ್ರಗತಿ ಪರಿಶೀಲನೆ

**ಗುರುಮಠಕಲ್ :** ನಗರದಲ್ಲಿ ಹಮ್ಮಿಕೊಂಡಿದ್ದ ಶಾಸಕರ ಜನ ಸಂಪರ್ಕ ಸಭೆಯಲ್ಲಿ ತಾಲೂಕಿನ ಅರ್.ಪಿ.ಡಿ ಟಾಸ್ಕ್ ಪೋರ್ಸ್ ಹಾಗೂ ಎಪಿಡಿ ಸಂಸ್ಥೆಯ ಸದಸ್ಯರು ಜಿಲ್ಲಾ ಪಂಚಾಯಿತಿ ತಾಲೂಕು ಪಂಚಾಯಿತಿ ಗ್ರಾಮ ಪಂಚಾಯಿತಿ ಕೆಡಿಪಿ ಮಾಸಿಕ ಹಾಗೂ ತ್ರೈಮಾಸಿಕ ಪರಿಶೀಲನ ಸಭೆಯಲ್ಲಿ ಎಲ್ಲ ಇಲಾಖೆಗಳಲ್ಲಿ ವಿಕಲಚೇತನಗೆ ಸಂಬಂಧಿಸಿದ 5% ಅನುದಾನದ ಬಳಕೆ ಮತ್ತು ಸುಲಭ ಲಭ್ಯತೆಯ ಕುರಿತು ಅನುಷ್ಠಾನದ ಪ್ರಗತಿ ಪರಿಶೀಲನ ಸಭೆಯಲ್ಲಿ ಚರ್ಚಿಸಬೇಕು ಎಂದು ಶಾಸಕರಿಗೆ ಮನವಿ ಪತ್ರ ಸಲ್ಲಿಸಿದರು.



ತಾಲೂಕಿನ ಗ್ರಾಮ ಪಂಚಾಯತಿ, ತಾಲೂಕ ಪಂಚಾಯತಿ 2025–26 ನೇ ಸಾಲಿನ 5% ಅನುದಾನದ ಕ್ರಿಯಾ ಯೋಜನೆಯು ಪರಿಣಾಮಕಾರಿಯಾಗಿ ರೂಪಿಸಲು ಸಂಬಂಧ ಪಟ್ಟ ಆಧಿಕಾರಿಗಳಿಗೆ ಸೂಚಿಸಬೇಕು ಎಂದು ಮನವಿ ಪತ್ರ ಸಲ್ಲಿಸಲಾಯಿತು. ಇದರೊಂದಿಗೆ ಶಾಸಕರ ಮೌಖಿಕ ಆದೇಶದ ಹಿನ್ನೆಲೆಯಲ್ಲಿಕಳೆದತಿಂಗಳು19ನೇ ತಾರೀಖಿನಂದು ಗುರುಮಠಕಲ್ ಸಮುದಾಯ ಆರೋಗ್ಯ ಕೇಂದ್ರದಲ್ಲಿ ವಿಕಲಚೇತನಕ್ಕೆ ಯುಡಿಐಡಿ ಕಾರ್ಡ್ ಶಿಬಿರವನ್ನು ಆಯೋಜಿಸಲಾಗಿತ್ತು.

ಒಟ್ಟಾರೆ 98 ಜನ ವಿಕಲಚೇತರನು ಇದರ ಸದುಪಯೋಗವನ್ನು ಪಡೆದ ಪರಿಣಾಮವಾಗಿ ಶಾಸಕರಿಗೆ ಅಭಿನಂದನಾ ಪತ್ರ ನೀಡಿ ಸನ್ಮಾನಿಸಲಾಯಿತು. ಇದರೊಂದಿಗೆ ತಮ್ಮ ಶಾಸಕರ ಅನುದಾನದ ಕುರಿತ ಕ್ರಿಯಾ ಯೋಜನೆ ರೂಪಿಸುವ ಸಂದರ್ಭದಲ್ಲಿ ಸಂಸ್ಥೆಯ ಬೆಂಬಲ ಖಂಡಿತವಾಗಿಯೂ ಪಡೆಯುವೆ ಎಂಬ ಭರವಸೆಯನ್ನು ನೀಡಿ–ದರು.

ಈ ಸಂದರ್ಭದಲ್ಲಿ ತಾಲೂಕ ಆರ್‌ಪಿಡಿ ಟಾಸ್ಕ್ ಫೋರ್ಸ್ ಅಧ್ಯಕ್ಷರಾದ ಸಿದ್ದನಗೌಡ ನಜರಪೂರ,

ಎಪಿಡಿ ಸಂಸ್ಥೆಯ ವಿರುಪಾಕ್ಷಿ ಮಾಲಿಪಾಟೀಲ್, ರಮೇಶ ಮಾನೆ,ಶಿವಯೋಗಪ್ಪ

ಸದಸ್ಯರಾದ ಹನುಮಂತು, ಚೆನ್ನಪ್ಪ,

ಗಂಗಪ್ಪ,ಚಂದ್ರಪ್ಪ,ಜಗದೀಶ ಭೂಮಾ,ಇನ್ನಿತರ ಸದಸ್ಯರು ಹಾಜರಿದ್ದರು.

## ತಪ್ಪು ಮಾಹಿತಿ ಕೊಟ್ಟ ಅಧಿಕಾರಿಗೆ ನೋಟಿಸ್: ಜಿಲ್ಲಾಧಿಕಾರಿ

**ರಾಯಚೂರು :** ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಸಭೆಗೆ ತಪ್ಪು ಮಾಹಿತಿ ನೀಡಿದ್ದಕ್ಕೆ ರಾಯಚೂರು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿಗೆ ಕಾರಣ ಕೇಳಿ ನೋಟಿಸ್ ಜಾರಿ ಮಾಡುವಂತೆ ಸಮಿತಿಯ ಅಧ್ಯಕ್ಷ ಎನ್.ಎಚ್. ಕೋನರಡ್ಡಿ ಜಿಲ್ಲಾಧಿಕಾರಿಗೆ ಸೂಚನೆ ನೀಡಿದರು.

ಮಹಿಳೆಯರ, ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಇತರ ಇಲಾಖೆಗಳ ಯೋಜನೆಗಳ ಹಾಗೂ ಕಾರ್ಯಕ್ರಮಗಳ ಬಗ್ಗೆ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಸಭೆಯಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಾರ್ಯಕ್ರಮಗಳ ಪರಿಶೀಲನೆ ನಡೆಸಿದ ಬಳಿ ಅಧಿಕಾರಿಗೆ ನೋಟಿಸ್ ನೀಡಲು ಆದೇಶಿಸಿದರು.

ಮಕ್ಕಳ ಕಲ್ಯಾಣ ಸಮಿತಿಯು 84 ಪ್ರಕರಣಗಳಲ್ಲಿ 66 ಪ್ರಕರಣಗಳನ್ನು ವಿಲೇವಾರಿ ಮಾಡಿದೆ. 18 ಪ್ರಕರಣಗಳು ಬಾಕಿ ಇವೆ ಎಂದು ಸಮಿತಿಗೆ ನೀಡಿದ ಬುಕ್‌ಲೆಟ್‌ನಲ್ಲಿ ಉಲ್ಲೇಖಿಸಿದ್ದೀರಿ. ಆದರೆ, ಪಿಪಿಟಿನಲ್ಲಿ ಬೇರೆ ಅಂಕಿ ಅಂಶಗಳನ್ನು ತೋರಿಸುತ್ತಿದ್ದಿರಲ್ಲ' ಎಂದು ಅಧ್ಯಕ್ಷರು ಪ್ರಶ್ನಿಸಿದರು.

ವಾರದ ತರಬೇತಿ ಮುಗಿಸಿ ಸಭೆಗೆ ಆಗಮಿಸಿದ್ದರಿಂದ ಪಿಪಿಟಿಯಷ್ಟೆ ಸರಿಪಡಿಸಲಾಗಿದೆ, ಬುಕ್‌ಲೆಟ್‌ನಲ್ಲಿ ತಿದ್ದುಪಡಿ ಮಾಡಿಲ್ಲ, ತಪ್ಪಾಗಿದೆ' ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ಪ್ರತಿಕ್ರಿಯಿಸಿದರು.

ಸಭೆಯಲ್ಲಿ ಚರ್ಚಿಸುವ ಪ್ರತಿಯೊಂದು ವಿಷಯವೂ ಕಡತಕ್ಕೆ ಹೋಗುವ ಮಹತ್ವದ ವಿಧಾನ ಮಂಡಲದ ಸದಸ್ಯರ ಸಮಿತಿ ಸಭೆಗೆ ಹೀಗೆ ತಪ್ಪು ಮಾಹಿತಿ ನೀಡಿದರೆ ಹೇಗೆ? ನಿಮಗೆ ಜವಾಬ್ದಾರಿ ಬೇಡವಾ? ಎಂದು ಸಮಿತಿಯ ಸದಸ್ಯರಾದ ಶರಣಗೌಡ ಕಂದಕೂರ ಹಾಗೂ ಕರೆಮ್ಮ ನಾಯಕ ಅಧಿಕಾರಿಯನ್ನು ತರಾಟೆ ತೆಗೆದುಕೊಂಡರು.

ಮಂತ್ರಾಲಯದಿಂದ ರಾಯಚೂರು ಕಡೆಗೆ ಬರುವಾಗ ವಾಹನವೊಂದರಲ್ಲಿ ಮಕ್ಕಳನ್ನು ಕೆಲಸಕ್ಕೆ ಕರೆದೊಯ್ಯುವುದನ್ನು ಖುದ್ದು ನೋಡಿದೆ. ನೀವು, ಕ್ಷೇತ್ರ ಭೇಟಿ ಕೊಡುತ್ತೀರಾ ಅಂತಹ ಮಕ್ಕಳನ್ನು ಪತ್ತೆ ಹಚ್ಚಿದ್ದೀರಾ? ಎಂದು ಸಮಿತಿಯ ಅಧ್ಯಕ್ಷರು ಜಿಲ್ಲಾ ಕಾರ್ಮಿಕ ಅಧಿಕಾರಿಗೆ ಕೇಳಿದರು.




ಗ್ಯಾರೇಜ್, ಹೋಟೆಲ್ ಇನ್ನಿತರ ಕಡೆಗೆ ಪರಿಶೀಲನೆ ನಡೆಸಿ 2023ನೇ ಸಾಲಿನಿಂದ ಇಲ್ಲಿವರೆಗೆ 53 ಪ್ರಕರಣ ದಾಖಲಿಸಿ 7 ಲಕ್ಷ ದಂಡ ವಿಧಿಸಲಾಗಿದೆ' ಎಂದು ಕಾರ್ಮಿಕ ಅಧಿಕಾರಿ ಆರತಿ ಸಭೆಗೆ ಮಾಹಿತಿ ನೀಡಿದರು.

ಈ ಭಾಗದ ಜನರಿಗೆ ತಿಳಿವಳಿಕೆ ಕೊರತೆ ಇದೆ. ಮಕ್ಕಳನ್ನು ಕೆಲಸಕ್ಕೆ ಕಳುಹಿಸದೇ ಶಾಲೆಗೆ ಸೇರಿಸುವಂತ ಜನಜಾಗೃತಿ ಕಾರ್ಯಕ್ರಮಕ್ಕೆ ಹೆಚ್ಚಿನ ಒತ್ತು ಕೊಡಬೇಕು. ಜಿಲ್ಲೆಯಾದ್ಯಂತ ನಿಯಮಿತ ಕ್ಷೇತ್ರ ಭೇಟಿ ನೀಡಿ ಪರಿಶೀಲನೆ ನಡೆಸಬೇಕು ಎಂದು ಸಮಿತಿಯ ಅಧ್ಯಕ್ಷರು ಕಾರ್ಮಿಕ ಅಧಿಕಾರಿಗೆ ಸೂಚನೆ ನೀಡಿದರು.

ಅಂಗನವಾಡಿ ಕಟ್ಟಡಕ್ಕೆ ಜಾಗ ಇಲ್ಲ: ಸರ್ಕಾರ ಕೊಡುವ ಹಣಕ್ಕೆ ರಾಯಚೂರು ನಗರದಲ್ಲಿ ಎಲ್ಲೂ ಜಾಗ ಸಿಗುತ್ತಿಲ್ಲ. ರಾಯಚೂರು ನಗರದಲ್ಲಿ 170 ಅಂಗನವಾಡಿಗಳು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿವೆ ಎಂದು ಶಾಸಕ ಡಾ.ಎಸ್ ಶಿವರಾಜ ಪಾಟೀಲ ಸಭೆಗೆ ತಿಳಿಸಿದರು. ಶಾಸಕರು, ಜಿಲ್ಲಾಧಿಕಾರಿ, ಪಾಲಿಕೆಯ ಆಯುಕ್ತರು ಎಲ್ಲರೂ ಸೇರಿ ಸಭೆ ನಡೆಸಿ, ಪ್ರತಿವರ್ಷ ಇಂತಿಷ್ಟು ಅಂಗನವಾಡಿಗಳಿಗೆ ಕಟ್ಟಡ ಗುರುತಿಸಬೇಕು ಎಂದು ಗುರಿನಿಗದಿಪಡಿಸಿ ಜಾಗ ಗುರುತಿಸಲು ಕ್ರಮವಹಿಸಬೇಕು ಎಂದು ಸಮಿತಿಯ ಅಧ್ಯಕ್ಷರು ಸಲಹೆ ನೀಡಿದರು.

ದೇವದುರ್ಗ ತಾಲ್ಲೂಕಿನಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಹುದ್ದೆಗಳು ಖಾಲಿ ಇರದಂತೆ ಕ್ರಮವಹಿಸಬೇಕು ಎಂದು ಶಾಸಕಿ ಕರೆಮ್ಮ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಮಿತಿಯ ಸದಸ್ಯರಾದ ಶಾಂತಾರಾಮ ಬುಡ್ನಸಿದ್ದಿ, ಸಚಿವಾಲಯದ ಜಂಟಿ ಕಾರ್ಯದರ್ಶಿ ಎಂ ಮಂಜುಳಾ, ಐಜಿಪಿ ಸತೀಶಕುಮಾರ, ಬಳ್ಳಾರಿ ವಲಯದ ಎಡಿಐಜಿ ವರ್ತಿಕಾ ಕಟಿಯಾರ್, ಜಿಲ್ಲಾಧಿಕಾರಿ ನಿತೀಶ್ ಕೆ., ಜಿಪಂ ಸಿಇಒ ಈಶ್ವರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪುಟ್ಟಮಾದಯ್ಯ ಉಪಸ್ಥಿತರಿದ್ದರು.

ಅಪೌಷ್ಟಿಕತೆ ಪ್ರಮಾಣ ಕಡಿಮೆ ಮಾಡಲು ಯತ್ನಿಸಿ ಬಾಲ ಕಾರ್ಮಿಕ ಪದ್ಧತಿ ನಿರ್ಮೂಲಗೆ ಒತ್ತುಕೊಡಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಸೂಚನೆ

**'ಪ್ರಕರಣ ಶೂನ್ಯಕ್ಕಿಳಿಸಿ'**

ಬಾಲ್ಯವಿವಾಹ ಪೋಕ್ಸೊ ಬಾಲಗರ್ಭಿಣಿಯರ ಪ್ರಕರಣಗಳನ್ನುಗಂಭೀರವಾಗಿಪರಿಗಣಿಸಬೇಕು. ಜನಜಾಗೃತಿಕಾರ್ಯಕ್ರಮಗಳನ್ನುಹೆಚ್ಚಿಸಬೇಕು ಎಂದು ಮುಖ್ಯಮಂತ್ರಿ ಉಪ ಮುಖ್ಯಮಂತ್ರಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಚಿವರು ಸಮಿತಿಗೆ ಸೂಚನೆ ನೀಡಿದ್ದಾರೆ ಎಂದು ತಿಳಿಸಿದರು. ಜಾಗೃತಿ ಕಾರ್ಯಕ್ರಮಗಳ ಮೂಲಕ ಬಾಲ್ಯವಿವಾಹ ಪೋಕ್ಸೊ ಬಾಲ ಗರ್ಭಿಣಿಯರ ಪ್ರಕರಣಗಳು ಶೂನ್ಯಕ್ಕಿಳಿಯುವಂತೆ ಮಾಡಬೇಕು' ಎಂದರು.

# ಸಿಜೆಐ ಮೇಲೆ ಶೂ ಎಸೆಯಲು ಯತ್ನ: ಕಠಿಣ ಕ್ರಮಕ್ಕೆ ಮನವಿ

**ಕನಕಗಿರಿ :** ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ಅವರ ಮೇಲೆ ವಕೀಲರೊಬ್ಬರು ಶೂ ಎಸೆಯಲು ಯತ್ನಿಸಿದ ಘಟನೆ ಖಂಡಿಸಿ ದಲಿತ ಸಂಘರ್ಷ ಸಮಿತಿ ಪದಾಧಿಕಾರಿಗಳು ಉಪ ವಿಭಾಗಾಧಿಕಾರಿ ಕ್ಯಾ.ಮಹೇಶ ಮಾಲಗಿತ್ತಿ ಅವರಿಗೆ ಗುರುವಾರ ಮನವಿ ಸಲ್ಲಿಸಿದರು.



ಸಂಘಟನೆಯ ಪ್ರಮುಖರು ಮಾತನಾಡಿ,'ಮುಖ್ಯ ನ್ಯಾಯಮೂರ್ತಿ ಹಾಗೂ ನ್ಯಾಯಾಲಯಕ್ಕೆ ಅವಮಾನ ಮಾಡಿದ ಕೆಟ್ಟ ಮನಸ್ಥಿತಿಯ ವಕೀಲನನ್ನು ಈ ಕೂಡಲೇ ಬಂಧಿಸಿ ಕಾನೂನು ಕ್ರಮ ಕೈಗೊಳ್ಳಬೇಕು' ಎಂದು ಆಗ್ರಹಿಸಿದರು.

'ದಲಿತ ಸಮುದಾಯಕ್ಕೆ ಸೇರಿರುವ ನ್ಯಾಯಮೂರ್ತಿ ಬಿ.ಆರ್.ಗವಾಯಿಯವರು ಸಾಮಾಜಿಕ ಅಸಮಾನತೆ ಎದುರಿಸಿ ಅರ್ಹತೆ ಮತ್ತು ಸ್ವಸಾಮರ್ಥ್ಯದ ಮೂಲಕ ಉನ್ನತ ಸ್ಥಾನಕ್ಕೆ ಏರಿದ್ದಾರೆ.

ಸಂವಿಧಾನ ಜಾರಿಗೆ ಬಂದು 75 ವರ್ಷಗಳ ಆದ ಬಳಿಕವೂ ಜಾತೀಯತೆ ಹಾಗೂ ಅಸಮಾನತೆ ಕೋಮುವಾದಿಗಳ ಮನಸ್ಸಿನಲ್ಲಿ ಇನ್ನೂ ಬೇರೂರಿದೆ ಎನ್ನುವುದಕ್ಕೆ ಈ ಘಟನೆ ಸಾಕ್ಷಿಯಾಗಿದೆ' ಎಂದು ಹೇಳಿದರು.

ಜಾತಿ ಮತ್ತು ಧರ್ಮದ ಹೆಸರಿನಲ್ಲಿ ಸಮಾಜ ಒಡೆದು, ಪರಸ್ಪರದ್ವೇಷಮತ್ತುಅಸಹನೆಹುಟ್ಟುಹಾಕಿರುವವಿಕೃತ ಮನಸ್ಸುಗಳು ಇಂದು ದೇಶದಲ್ಲಿ ವಿಜೃಂಭಿಸುತ್ತಿವೆ. ರಾಕೇಶ್ ಕಿಶೋರ್ ಅವರಂಥ ಮನುವಾದಿ ಮನಸ್ಸುಗಳು ಹುಟ್ಟಿಕೊಂಡು ಕೆಲವು ಪುಂಡರ ಜೊತೆ ಸೇರಿದುಷ್ಕೃತ್ಯಸಂಭ್ರಮಿಸುವುದನ್ನುಕಾಣುತ್ತಿರುವುದು ದುರಂತವಾಗಿದೆ' ಎಂದರು.

ಇಂಥವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು' ಎಂದು ಒತ್ತಾಯಿಸಿದರು.

ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ಅವರಿಗೆ ಹಾಗೂ ನ್ಯಾಯಾಲಯಕ್ಕೆ ಅವಮಾನ ಮಾಡಿದ ವಕೀಲನನ್ನು ಬಂಧಿಸಿ ಅವರ ಮೇಲೆ ಹಾಗೂ ಅವರನ್ನು ಬೆಂಬಲಿಸುವವರ ವಿರುದ್ಧ ಸೂಕ್ತ ಕ್ರಮ ಜರುಗಿಸಬೇಕು' ಎಂದು ಸಂಘಟನೆಯ ಜಿಲ್ಲಾ ಸಂಚಾಲಕ ದುರುಗಪ್ಪ ದೊಡ್ಡಮನಿ, ತಾಲ್ಲೂಕು ಸಂಚಾಲಕ ವೆಂಕಟೇಶ ಪೂಜಾರಿ ಆಗ್ರಹಿಸಿದರು.

ಪ್ರಮುಖರಾದ ಕನಕಪ್ಪ ಜವಳಗೇರಿ, ಹನುಮೇಶ ಜವಳಗೇರಿ, ಉಮೇಶ ಸೋಮಸಾಗರ ಇದ್ದರು.

# 'ನಾಯಕರಾಗಲು ಜನರೊಂದಿಗೆ ಗುರುತಿಸಿಕೊಳ್ಳಿ'

**ಕುಷ್ಟಗಿ :** 'ಕಾಂಗ್ರೆಸ್ ಉನ್ನತ ಸ್ಥಾನಕ್ಕೆ ಏರಲು ಬಹಳಷ್ಟು ಅವಕಾಶಗಳಿವೆ. ಸ್ಥಳೀಯ ಮಟ್ಟದಲ್ಲಿ ಜನರೊಂದಿಗೆ ಗುರುತಿಸಿಕೊಂಡರೆ ಮಾತ್ರ ಭವಿಷ್ಯದಲ್ಲಿ ನಾಯಕರಾಗಲು ಸಾಧ್ಯ' ಎಂದು ರಾಷ್ಟ್ರೀಯ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಮತ್ತು ರಾಜ್ಯದ ಉಸ್ತುವಾರಿ ನಿಗಮ್ ಭಂಡಾರಿ ಹೇಳಿದರು.

ಪಟ್ಟಣದಲ್ಲಿ ಶುಕ್ರವಾರ ತಾಲ್ಲೂಕು ಯುವ ಕಾಂಗ್ರೆಸ್ ಘಟಕದ ವತಿಯಿಂದ ಏರ್ಪಡಿಸಲಾಗಿದ್ದ ಯುವ ಸಮ್ಮೇಳನ ಹಾಗೂ ಕಾರ್ಯಕಾರಿಣಿ ಸಭೆ ಉದ್ಘಾಟಿಸಿ ಮಾತನಾಡಿದ ಅವರು,'ಕಾಂಗ್ರೆಸ್ ಪಕ್ಷ ಉತ್ತಮ ರೀತಿಯಲ್ಲಿ ಕರ್ತವ್ಯ ನಿರ್ವಹಿಸುವ ಕಾರ್ಯಕರ್ತರಿಗೆ ಬೆನ್ನೆಲುಬಾಗಿ ಇರುತ್ತದೆ. ಸ್ಥಳೀಯ ಮಟ್ಟದಲ್ಲಿ ಜನರೊಂದಿಗೆ ಬೆರೆಯುವ ಮೂಲಕ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಗುಣ ಬೆಳೆಸಿಕೊಂಡರೆ ಪಕ್ಷದಲ್ಲಿ ಪ್ರಬುದ್ಧ ನಾಯಕತ್ವ ಹೊಂದಲು ಸಾಧ್ಯ' ಎಂದರು.

ರಾಜ್ಯದಲ್ಲಿ ಪಕ್ಷ ಮತ್ತು ಸರ್ಕಾರದೊಂದಿಗೆ ಯುವ ಕಾಂಗ್ರೆಸ್ ಕಾರ್ಯಕರ್ತರು ಗಟ್ಟಿಯಾಗಿ ನಿಂತಿರುವ ಕಾರಣಕ್ಕೆ ಸರ್ಕಾರ ಉತ್ತಮ ಯೋಜನೆಗಳನ್ನು ಜನರಿಗೆ ತಲುಪಿಸುವ ಕೆಲಸ ಪರಿಣಾಮಕಾರಿಯಾಗಿ ನಿರ್ವಹಿಸಲು ಸಾಧ್ಯವಾಗುತ್ತಿದೆ. ಜವಾಬ್ದಾರಿಯುತ ಯುವ ಸಮೂಹ



ಹೆಚ್ಚಾದಂತೆ ಪಕ್ಷಕ್ಕೆ ರಾಜನೀತಿ ರೂಪಿಸಲು ಸಹಾಯವಾಗುತ್ತದೆ. ಬರುವ ವಿಧಾನಸಭಾ ಚುನಾವಣೆಯನ್ನುಗಮನದಲ್ಲಿರಿಸಿಕೊಂಡು ಯುವ ಕಾರ್ಯಕರ್ತರು ಮತಗಟ್ಟೆ ಮಟ್ಟದಲ್ಲಿ ಪ್ರವಾಸ ಹಮ್ಮಿಕೊಳ್ಳಬೇಕು' ಎಂದು ಹೇಳಿದರು.

ಕೇಂದ್ರದಲ್ಲಿ ಯುಪಿಎ ಸರ್ಕಾರ ಇದೆ. ಸದ್ಯ ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿದ್ದು, ಜನರ ಮನೆ ಮನೆಗಳಿಗೆ ಹೋಗಿ ಸರ್ಕಾರದ ಸಾಧನೆಗಳ ಬಗ್ಗೆ ಮನವರಿಕೆ ಮಾಡಿಕೊಡಬೇಕು. ಸರ್ಕಾರದ ಕಾರ್ಯಕ್ರಮಗಳಕುರಿತುಜನರಅಭಿಪ್ರಾಯ ಸಂಗ್ರಹಿಸಬೇಕು.

ಅದೇ ರೀತಿ ದೇಶದಲ್ಲಿ ಬಿಜೆಪಿ ಮತ ಕಳವಿಗೆ ಇಳಿದುಅಧಿಕಾರದಚುಕ್ಕಾಣಿಹಿಡಿದಿರುವುದು ಮತ್ತು ದೇಶದ ಆಗುಹೋಗುಗಳನ್ನೂ ಜನರಿಗೆ ತಿಳಿಸುವ ಪ್ರಯತ್ನ ಅಗತ್ಯವಾಗಿದೆ' ಎಂದರು.

ಇತ್ತೀಚೆಗೆ ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಮೇಲೆ ವಕೀಲ ಶೂ ಎಸೆಯಲು ಪ್ರಯತ್ನಿಸಿದ ಘಟನೆಯನ್ನು ಖಂಡಿಸಿದ ಅವರು,'ಗಣತಂತ್ರ ವ್ಯವಸ್ಥೆ, ಸಂವಿಧಾನ ಅಪಾಯದಲ್ಲಿದೆ. ದೇಶದಲ್ಲಿ ನಿರುದ್ಯೋಗ, ಭ್ರಷ್ಟಾಚಾರ, ಮಹಿಳೆಯರ ಮೇಲೆ ಅತ್ಯಾಚಾರದಂಥ ಘಟನೆಗಳು ಹೆಚ್ಚುತ್ತಿವೆ' ಎಂದು ಕೇಂದ್ರದ ಬಿಜೆಪಿ ಸರ್ಕಾರವನ್ನು ಟೀಕಿಸಿದರು.

ಯುವ ಕಾಂಗ್ರೆಸ್ ರಾಜ್ಯಾಧ್ಯಕ್ಷ ಎಚ್.ಎಸ್. ಮಂಜುನಾಥಗೌಡ ಮಾತನಾಡಿ,'ರಾಜಕೀಯ ನಿಂತ ನೀರಲ್ಲ. ಬಹಳಷ್ಟು ಅವಕಾಶಗಳಿರುತ್ತವೆ. ಅನೇಕ ದೊಡ್ಡ ಮಟ್ಟದ ಮುಖಂಡರು ಯುವ ಕಾಂಗ್ರೆಸ್ ಮೂಲಕವೇ ರಾಜಕೀಯವಾಗಿ ಮೇಲೆ ಬಂದಿದ್ದಾರೆ. ಹಾಗಾಗಿ ನಾಯಕತ್ವದ ಗುಣ ಬೆಳೆಸಿಕೊಳ್ಳಬೇಕು. ಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆ ಟಿಕೆಟ್ ಹಂಚಿಕೆಯಲ್ಲಿ ಯುವಕರಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತದೆ. ಆದರೆ, ಪಕ್ಷ ಸಂಘಟನೆ ಕೆಲಸ ಮಾಡದವರನ್ನು ಯಾರೇ ಆಗಿದ್ದರೂ ಮುಲಾಜಿಲ್ಲದೆ ಬದಲಾಯಿಸಬೇಕಾಗುತ್ತದೆ' ಎಂದರು.

ಯುವ ಕಾಂಗ್ರೆಸ್ ರಾಜ್ಯ ಉಪಾಧ್ಯಕ್ಷರಾದ ದೀಪಿಕಾ ರೆಡ್ಡಿ, ಅಬ್ದುಲ್ ದೇಸಾಯಿ, ಇಲಾಹಿ ಸಿಕಂದರ್, ಜಿಲ್ಲಾಧ್ಯಕ್ಷ ಲಿಂಗೇಶ ಕಲ್ಗುಡಿ, ಜಿಲ್ಲಾ ದಿಶಾ ಸಮಿತಿ ಸದಸ್ಯ ದೊಡ್ಡಬಸವ ಬಯ್ಯಾಪುರ, ಲಾಡ್ಲೆಮಷಾಕ್ ಹಾಗೂ ಇತರರು ಮಾತನಾಡಿದರು.

ತಾಲ್ಲೂಕು ಯುವ ಕಾಂಗ್ರೆಸ್ ಅಧ್ಯಕ್ಷ ಈರಣ್ಣ ಬದಾಮಿ ಅಧ್ಯಕ್ಷತೆ ವಹಿಸಿದ್ದರು. ವಿಜಯ ನಾಯಕ, ಮಾಲತಿ ನಾಯಕ, ಶಾರದಾ ಕಟ್ಟಿಮನಿ, ಬ್ಲಾಕ್ ಅಧ್ಯಕ್ಷ ಚಂದ್ರಶೇಖರ ನಾಲತ್ವಾಡ, ವೀರನಗೌಡ ಬದಾಮಿ, ಅರ್ಜುನಗೌಡ, ಬಾಹುಬಲಿ ಜೈನ್ ಸೇರಿದಂತೆ ರಾಜ್ಯ, ಜಿಲ್ಲೆ ಹಾಗೂ ತಾಲ್ಲೂಕಿನ ಅನೇಕ ಪ್ರಮುಖರು, ಯುವ ಕಾರ್ಯಕರ್ತರು ಹಾಜರಿದ್ದರು.

ಪ್ರಾರಂಭದಲ್ಲಿ ಈಚೆಗೆ ನಿಧನರಾದ ಪಕ್ಷದ ಕಾರ್ಯಕರ್ತರಾದ ಶರಣಗೌಡ ಮಾಲಿಪಾಟೀಲ, ಬಾಷಾ ಸವಡಿ ನಿಧನಕ್ಕೆ ಸಂತಾಪ ವ್ಯಕ್ತಪಡಿಸಲಾಯಿತು. ಕೇದಾರನಾಥ ತುರಕಾಣಿ ನಿರೂಪಿಸಿದರು.

# ಬಾಕಿ ವೇತನ ಪಾವತಿಗೆ ಅತಿಥಿ ಶಿಕ್ಷಕರ ಆಗ್ರಹ

**ಯಲಬುರ್ಗಾ :** ಕೆಕೆಆರ್‌ಡಿಬಿ ನೇಮಿಸಿದ ಕುಕನೂರು ಹಾಗೂ ಯಲಬುರ್ಗಾ ತಾಲ್ಲೂಕುಗಳ ಸರ್ಕಾರಿ ಪ್ರಾಥಮಿಕ ಶಾಲೆಗಳ ಅತಿಥಿ ಶಿಕ್ಷಕರಿಗೆ ಬಾಕಿ ವೇತನ ಪಾವತಿಸಬೇಕು ಎಂದು ಆಗ್ರಹಿಸಿ ಪ್ರಭಾರ ಕ್ಷೇತ್ರ ಶಿಕ್ಷಣಾಧಿಕಾರಿಗೆ ಅತಿಥಿ ಶಿಕ್ಷಕರು ಮನವಿ ಸಲ್ಲಿಸಿದರು.




ಅತಿಥಿ ಶಿಕ್ಷಕರು ಹಾಗೂ ಡಿ ಗ್ರೂಪ್ ನೌಕರರು ಪ್ರಭಾರ ಕ್ಷೇತ್ರ ಶಿಕ್ಷಣಾಧಿಕಾರಿ ಅಶೋಕ ಗೌಡ ಅವರಿಗೆ ಮನವಿ ಸಲ್ಲಿಸಿ,'

ಕಳೆದ ಒಂದು ವರ್ಷದಿಂದ ವೇತನವಿಲ್ಲದೆ ಕೆಲಸ ಮಾಡುತ್ತಿದ್ದೇವೆ. ಕೂಡಲೇ ವೇತನ ಬಿಡುಗಡೆ ಮಾಡಬೇಕು' ಎಂದು ಮನವಿಯಲ್ಲಿ ಕೋರಿದ್ದಾರೆ.

ಒಂದು ಸ್ಥಳದಿಂದ ಮತ್ತೊಂದು ಸ್ಥಳಕ್ಕೆ ಹೋಗಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರು ಹಾಗೂ ಆಯಾಗಳು ವರ್ಷಗಟ್ಟಲೇ ವೇತನವಿಲ್ಲದೆ ಹಾಗೆಯೇ ದುಡಿಯುತ್ತಿರುವುದರಿಂದ ಅವರ ಕುಟುಂಬ ನಿರ್ವಹಣೆ ಕಷ್ಟವಾಗುತ್ತಿದೆ. ಈ ಬಗ್ಗೆ ಮೇಲಧಿಕಾರಿಗಳು ಹಾಗೂ ಶಾಸಕರ ಗಮನಕ್ಕೆ ತರಲಾಗಿದೆ. ಆದರೂ ಅನುದಾನ ಬಿಡುಗಡೆಯಾಗಿಲ್ಲ' ಎಂದರು.

ಅತಿಥಿ ಶಿಕ್ಷಕರ ಸಂಘದ ಯಲಬುರ್ಗಾ ತಾಲ್ಲೂಕು ಘಟಕದ ಮಾಜಿ ಅಧ್ಯಕ್ಷ ಶರಣಪ್ಪ ಏಳುಗುಡ್ಡದ, ವಸಂತಕುಮಾರ ಗುಡಿ, ರಮೇಶ ಗಾಣದಾಳ, ಮಂಜುಳಾ ಗುತ್ತೂರ, ಮಹಾದೇವಿ, ಮರ್ತುಜಾ, ದಶರಥ, ಚೈತ್ರಾ ಅಂಗಡಿ, ಸಂಗೀತಾ ಯಲಬುರ್ಗಾ, ಇಂದಿರಾಬಾಯಿ, ಸುಜಾತ, ಶಿವರಾಜ, ಭಾಗೀರಥಿ, ಅಶ್ವಿನಿ, ಶರಣಪ್ಪ, ಯಲ್ಲಪ್ಪ, ಸುಮರೀನ್, ಗೀತಾ, ಅಕ್ಕಮ್ಮ, ಹನುಮೇಶ, ಬಸವರಾಜ ಇದ್ದರು.

# 'ಅಂತರಂಗ ಶುದ್ಧಿಯಿಂದ ದೇವರನ್ನೇ ಕಂಡ ಶರಣರು'

**ಕಾರಟಗಿ:**'ಅಂತರಂಗದಪರಿಶುದ್ಧತೆಯಿಂದ ದೇವರನ್ನು ಕಾಣುವ ಸಾತ್ವಿಕ ಶಕ್ತಿಯನ್ನು ಶರಣು ಸೋಮನಾಳದ ಗುರುಲಿಂಗಪ್ಪ ಶಿವಶರಣರು ಹೊಂದಿದ್ದರು' ಎಂದು ಹೆಬ್ಬಾಳದ ನಾಗಭೂಷಣ ಶಿವಾಚಾರ್ಯರು ಹೇಳಿದರು.

ಪಟ್ಟಣದ ಕೆರೆಬಸವೇಶ್ವರ ಕಲ್ಯಾಣ ಮಂಟಪದಲ್ಲಿ ಸೋಮನಾಳದ ಗುರುಲಿಂಗಪ್ಪ ಶಿವಶರಣರ ಶಿಷ್ಯರು ಈಚೆಗೆ ಆಯೋಜಿಸಿದ್ದ ಶಿವಾನುಭವಗೋಷ್ಠಿಯ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಗುರುಲಿಂಗಪ್ಪ ಶಿವಶರಣರು ಭೌತಿಕ ಜೀವನದಲ್ಲಿದ್ದರೂ ಸಂಬಂಧಗಳೊಂದಿಗೆ ನಿರ್ಲಿಪ್ತ ಮನೋಭಾವ ತಳೆದಿದ್ದರು. ಸಾವಿರಾರು ಭಕ್ತರ ಸಂಕಟಗಳನ್ನು ಪರಿಹರಿಸಿದ್ದರು. ಅವರ ಯತ್ನದಿಂದಾಗಿ ಈ ಭಾಗದಲ್ಲಿ ಕಾಯಕ, ದಾಸೋಹ ಮತ್ತು ಸಮಾನತೆಗಳು ನೆಲೆ ನಿಂತು




ಇಂದು 101ನೇ ಶಿವಾನುಭವ ಗೋಷ್ಠಿ ನಡೆದಿದೆ' ಎಂದರು. ಕುಷ್ಟಗಿಯ ಸಾಕೇಶ್ವರ ಸೇವಾ ಟ್ರಸ್ಟ್‌ನ ಸದಾನಂದ ಮಹಾರಾಜ ಮಾತನಾಡಿ,'ನಿರಂತರ ಶಿವಾನುಭವಗೋಷ್ಠಿ ನಡೆಸಿ, ಧಾರ್ಮಿಕ, ಸಾಮಾಜಿಕ ಸೇವೆ ಮಾಡುತ್ತಾ, ಮಠ ಮಾಡಬೇಕಾದ ಕಾರ್ಯವನ್ನು ಭಕ್ತರು ಮಾಡುತ್ತಿರುವುದು ಪ್ರಸಂಶನಾರ್ಹ' ಎಂದು ಹೇಳಿದರು.

ಅರಳಳ್ಳಿ ಮಠದ ರೇವಣಸಿದ್ದಯ್ಯಸ್ವಾಮಿ ಮಾತನಾಡಿದರು. ಅಯ್ಯಪ್ಪ ಶಿವಶರಣರು ಅಧ್ಯಕ್ಷತೆ ವಹಿಸಿದ್ದರು.

ತಲೇಖಾನದವೀರಭದ್ರಶರಣರು,ಬೂದುರ ಮಠದ ಮಲ್ಲಿಕಾರ್ಜುನ ಶಿವಾಚಾರ್ಯರು, ಘಡಿವಡಕಿಯ ಶರಣಪ್ಪ ಶರಣರು, ಆರಾಳ ಹಿರೇಮಠದ ಸಂಗಯ್ಯಸ್ವಾಮಿ ಉಪಸ್ಥಿತರಿದ್ದರು.

ಸಂಚಾಲಕ ಮೈಲಾಪುರ ವೀರನಗೌಡ ಮಾಲಿಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು.

ಮುಖಂಡರಾದ ಚನ್ನಬಸಪ್ಪ ಸುಂಕದ, ಮೌನೇಶ ದಢೇಸುಗೂರು, ಬಸವರಾಜ ಶೆಟ್ಟರ್, ಶರಣಪ್ಪ ಕಲಿಕೇರಿ, ಪ್ರಭುಸ್ವಾಮಿ, ಶರಣಪ್ಪ ನಾಗೋಜಿ, ಅಮರೇಗೌಡ ಮಾಲಿಪಾಟೀಲ ಮೈಲಾಪುರ, ವೆಂಕಪ್ಪ ಭೋವಿ ನಾಗನಕಲ್, ಮಹಾಬಳೇಶ್ವರ ಶಾಸ್ತ್ರಿ ಆಕಳಕುಂಪಿ, ಕಲ್ಲನಗೌಡ ಮಾಲಿಪಾಟೀಲ, ಬಸವರಾಜ ಹಗೆದಾಳ, ಶಂಕ್ರಪ್ಪ ಕಾನಿಹಾಳ, ರಾಜು ಗುಡತಿಹಾಳ, ನರಸಿಂಗಪ್ಪ ನಂದಿಹಾಳ, ಗರೀಬ್‌ಸಾಬ್, ಮಂಜುನಾಥ, ರುದ್ರಪ್ಪ ವಗರನಾಳ, ಮಲ್ಲಯ್ಯಸ್ವಾಮಿ ಬುಕ್ಕನಹಟ್ಟಿ, ಪಂಪನಗೌಡ ರಾರಾವಿ, ಬೀರಪ್ಪ ಸಿದ್ದಾಪುರ,

ಚನ್ನಪ್ಪಹಳ್ಳಿ,ಮಲ್ಲಪ್ಪಯತ್ನಟ್ಟಿ,ಪಂಪಾಪತೆಪ್ಪ ಪೂಜಾರಿ, ನರಸಪ್ಪ ಬೈರಾಪುರ, ಶ್ವೇತಾ ಕೆಸರಟ್ಟಿ, ಪ್ರಭಾವತಿ ಜೀರಾಳ, ಕೃಷ್ಣಪ್ಪ ನಾಯಕ, ಭೋಜರಾಜ್, ರಾಚಯ್ಯಸ್ವಾಮಿ ಗವಾಯಿ, ಬಸವರಾಜ ಮೋತಿ, ಬಸವರಾಜ

# ಮಕ್ಕಳಲ್ಲಿರುವ ಪ್ರತಿಭೆಗೆ ಪ್ರೋತ್ಸಾಹ ನೀಡೋಣ: ಮಹೇಶ ಪೋತದಾರ

**ವಿಜಯಪುರ :** ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಅತ್ಯಂತ ಕ್ರೀಯಾಶೀಲವಾಗಿ ಕಾರ್ಯಕ್ರಮ ಮಾಡುತ್ತಿರುವದು ಅತ್ಯಂತ ಶ್ಲಾಘನೀಯ ಕಾರ್ಯ. ಮಕ್ಕಳಿಗೆ ಸಾಹಿತ್ಯ ಅಭಿರುಚಿ ಬೆಳೆಸುವ ಪ್ರಯತ್ನ ಸಮ್ಮೇಳನದ ಉದ್ದೇಶವಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೊತದಾರ ಅಭಿಪ್ರಾಯ ವ್ಯಕ್ತಪಡಿಸಿದರು

ಇಂದು ವಿಜಯಪುರ ನಗರದ ಸ್ಟೇಶನ ರಸ್ತೆಯಲ್ಲಿರುವ ಸರಕಾರಿ ಮೇಟ್ರಿಕ ಪೂರ್ವ ವಸತಿ ನಿಲಯದಲ್ಲಿ ಜಿಲ್ಲೆಯ ಎಲ್ಲ ವಸತಿ ಶಾಲೆಯ ಪ್ರಾಚಾರ್ಯರು ಹಾಗು ವಸತಿ ನಿಲಯದ ಮೇಲ್ವಿಚಾರಕ ಸಭೆಯಲ್ಲಿ ಮಾತನಾಡಿ

ಮಕ್ಕಳಲ್ಲಿರುವ ಸೂಕ್ತವಾದ ಪ್ರತಿಭೆಗೆ ಪ್ರೋತ್ಸಾಹ ನೀಡುವ ಮಕ್ಕಳ ಸಾಹಿತ್ಯ ಸಮ್ಮೇಳನ ಮಾಡೋಣ. ವಿಜಯಪುರ ಜಿಲ್ಲೆ ಮಕ್ಕಳ ಸಾಹಿತ್ಯಕ್ಕೆ ಅಪಾರವಾದ ಕೊಡುಗೆ ನೀಡಿದೆ ಎಂದರು

ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಹಾಸಿಂಪೀರ ವಾಲಿಕಾರ ಮಾತನಾಡಿ ನವಂಬರ ಕೊನೆಯ ವಾರದಲ್ಲಿ ಜರಗುವ ಮಕ್ಕಳ ಸಾಹಿತ್ಯ ಸಮ್ಮೇಳನ ಅಥ9ಪೂಣ9ವಾಗಿ ಆಚರಿಸೋಣ. ಜಿಲ್ಲೆಯಲ್ಲಿರುವ ಎಲ್ಲ ವಸತಿ ಶಾಲೆಗಳ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ವೇದಿಕೆ ನೀಡೋಣ ಜಿಲ್ಲಾಡಳಿತ ಹಾಗು ಸಚಿವರಾದ



ಎಂ ಬಿ ಪಾಟೀಲ ಹಾಗು ಶಿವಾನಂದ ಪಾಟೀಲ. ಎಲ್ಲ ವಿಧಾನ ಸಭೆ ಹಾಗು ವಿಧಾನ ಪರಿಷತ್ತಿನ ಸದಸ್ಯರನ್ನು ಒಳಗೊಂಡು ಮಕ್ಕಳ ಸಾಹಿತ್ಯ ಸಮ್ಮೇಳನ ಆಯೋಜನೆ ಮಾಡುತ್ತಿದ್ದೇವೆ. ಕನ್ನಡ ಸಾಹಿತ್ಯ ಪರಿಷತ್ತು ಮಕ್ಕಳ ವ್ಯಕ್ತಿತ್ವ ವಿಕಸನದ ಕಡೆಗೆ ಹೆಚ್ಚಿನ ಮಹತ್ವ ನೀಡುತ್ತದೆ ಅನೇಕ ಮನೋವೈಜ್ಞಾನಿಕ ವಿಷಯಗಳ ಚಚೆ9ಗೆ ಅವಕಾಶ ಸಿಗಲಿದೆ ಎಂದರು.

ಪ್ರಾಚಾರ್ಯ ಅಹಮ್ಮದ ಪಟೇಲ ಭಾಗವಾನ. ಜಿಂ ಎಂ ಗುಳಗಿ ವೇದಿಕೆಯ ಮೇಲಿದ್ದರು. ಪ್ರಾಚಾರ್ಯರಾದ ಗಂಗಾಧರ ಅಂಕಲಗಿ ದುಂಡಪ್ಪ ಮೋಟೆ. ಡಿ ಎಂ ಚಲವಾದಿ. ಎಸ್ ಸಿ ವಗ್ಗಿ. ಎಸ್ ತಳಕೇರಿ. ಶ್ರೀಶೈಲ ಕೊರಳ್ಳಿ. ಕರುಣಾಮಯಿ ದುಮ್ಮವಾಡ. ಬೊರಮ್ಮ ಬಿರಾದಾರ. ಮಲ್ಲಿಕಾರ್ಜುನ ಹಟ್ಟಿ. ರವೀಂದ್ರ ಬಂಥನಾಳ. ಪ್ರಭಾಕರ ಪಾಟೀಲ. ಸಬನಮ್ ಅತ್ತಾರ. ಗೋವಿಂದ ವಾಲೀಕಾರ. ಜಿ ಪಿ ಗುಪ್ತಾ. ಲಕ್ಷ್ಮಿ ಪಲ್ಲೇದ. ವಿಜಯ ಪವಾರ. ನೀಲಪ್ಪ ಕೊಡಬಾಗಿ. ದಯಾನಂದ ಹೀರೆಮಠ. ಚಂದ್ರಶೇಖರ ಸಜ್ಜನ. ಡಿ ಎನ್ ವಾಡಜೆ ನಿಲಯ ಮೇಲ್ವಿಚಾರಕರಾದ ಕವಿತಾ ಹೂಗಾರ. ಸೂರ್ಯಕಾಂತ ಹೊಸಮನಿ. ಮಹಮ್ಮದ ಭಾಗವಾನ. ಬಸವರಾಜ ಮಿಜಿ9. ನಾಗೇಶ ದುದಗಿ. ಎಂ ಎಂ ಪಾಟೀಲ. ಸಂಜೀವ ಹಿರೊಳ್ಳಿ.ನಾಗೇಶ ಮಾಳಿ ಪ್ರಭಾಕರ ಪಾಟೀಲ. ಮಾಲತಿ ತಡಲಗಿ. ದ್ರಾಕ್ಷಾಯಿಣಿ. ಶಂಕರ ಬ್ಯಾ–ಕೋಡ.ಅರವಿಂದಹಡಪದ.ಗಣಪತಿಬಜಂತ್ರಿ. ಭಾರತಿ ಪಾಟೀಲ. ಬಾಬುಗೌಡ ಬಿರಾದಾರ ಸೋಮರಡ್ಡಿ. ಕೋನರಡ್ಡಿ ಮುಂತಾದವರು ಉಪಸ್ಥಿತರಿದ್ದರು.

# ಸಿದ್ದೇಶ್ವರ ಸಹಕಾರಿ ಬ್ಯಾಂಕ್ ಶೇರುದಾರ ಸಹಕಾರ ಸಮಾಲೋಚನ ಸಭೆ

**ವಿಜಯಪುರ :** ಶ್ರೀ ಸಿದ್ದೇಶ್ವರ ಬ್ಯಾಂಕ್ ಸರ್ವತೋಮುಖ ಪ್ರಗತಿ ದೃಷ್ಟಿಕೋನದಿಂದ ಹಾಲಿ ಇರುವ ಪೆನಲ್ ನಿರ್ದೇಶಕರನ್ನೇ ಮರು ಆಯ್ಕೆ ಮಾಡಬೇಕು,

ಈ ಬ್ಯಾಂಕ್ ಷೆಡ್ಯೂಲ್ಡ್ ಬ್ಯಾಂಕ್ ಆಗಿಸುವ ಕಾರ್ಯಕ್ಕೆ ನಾನು ಸಹ ಬೆಂಬಲವಾಗಿ ನಿಲ್ಲುವೆ ಎಂದು ಕೃಷಿ ಉತ್ಪನ್ನ ಮಾರುಕಟ್ಟೆ, ಜವಳಿ ಖಾತೆ ಸಚಿವ ಹಾಗೂ ಡಿಸಿಸಿ ಬ್ಯಾಂಕ್ ಅಧ್ಯಕ್ಷ ಶಿವಾನಂದ ಪಾಟೀಲ ಮನವಿ ಮಾಡಿದರು.

ಶುಕ್ರವಾರ ನಗರದ ಶ್ರೀಗುರುಸಂಗನಬಸವ ಮಂಗಲ ಕಾರ್ಯಾಲಯದಲ್ಲಿ ಶ್ರೀ ಸಿದ್ದೇಶ್ವರ ಸಹಕಾರಿ ಬ್ಯಾಂಕ್ ಆಡಳಿತ ಮಂಡಳಿ ಚುನಾವಣಾ ಹಿನ್ನೆಲೆಯಲ್ಲಿ ಸಹಕಾರ ಸಮಾಲೋಚನಾ ಸಭೆಯಲ್ಲಿ ಮಾತನಾಡಿದ ಅವರು, ಸಹಕಾರ ರಂಗದಲ್ಲಿ ಚುನಾವಣೆಗೆ ಬದಲಾಗಿ ಸಾಮರಸ್ಯದಿಂದ ಅವಿರೋಧ ಆಯ್ಕೆಯಾಗಬೇಕು ಎನ್ನುವುದು ನನ್ನ ಭಾವನೆ ಕೂಡಾ ಹೌದು ಎಂದರು.

ಅವಿರೋಧವಾಗಿ ಆಯ್ಕೆ ಬಗ್ಗೆ ಅನೇಕ ರೀತಿ ಶ್ರಮಿಸಿದರೂ ಅದು ಸಾಧ್ಯವಾಗಲಿಲ್ಲ, ಈಗ ಚುನಾವಣೆ ಎದುರಾಗಿದೆ.

ಇದರಿಂದ ಆರ್ಥಿಕ ಹೊರೆ ತಪ್ಪಿಸಬೇಕೆಂಬ ಪ್ರಯತ್ನ ಮಾಡಿದರೂ ಸಾಧ್ಯವಾಗದೇ ಚುನಾವಣೆ ಎದುರಾಯಿತು ಎಂದರು.

ವೀರಶೈವ ಲಿಂಗಾಯತ ಸೇರಿದಂತೆ ಎಲ್ಲ ಜಾತಿ, ಸಮುದಾಯದ ಮತದಾರರು ಇರುವ ಶ್ರೀಸಿದ್ದೇಶ್ವರ ಬ್ಯಾಂಕ್ ಜಾತ್ಯಾತೀತ ಬ್ಯಾಂಕ್ ಎನಿಸಿದೆ ಎಂದರು.

ಈ ಹಿಂದೆ ಪ್ರಯತ್ನಪಟ್ಟರೆ ಎಂಎಲ್‌ಎ ಟಿಕೇಟ್ ಸಿಗುತ್ತಿತ್ತು, ಆದರೆ ಶ್ರೀ ಸಿದ್ದೇಶ್ವರ ಬ್ಯಾಂಕ್ ಸದಸ್ಯತ್ವ ಸಿಗುತ್ತಿರಲಿಲ್ಲ,

ಅಷ್ಟೊಂದು ಪ್ರತಿಷ್ಠಿತ ಸಹಕಾರಿ ಸಂಸ್ಥೆಯಾಗಿದ್ದು,

ಅಂಥ ಶ್ರೀಸಿದ್ದೇಶ್ವರ ಬ್ಯಾಂಕಿನಲ್ಲಿ ನಾನೂ ಕೂಡ




ಸದಸ್ಯ ಎಂಬುದು ನನಗೆ ಹೆಮ್ಮೆಯ ಸಂಗತಿ ಎಂದರು.

ನಾನು ಡಿಸಿಸಿ ಬ್ಯಾಂಕ್ ಅಧ್ಯಕ್ಷನಾಗಿ ಅಧಿಕಾರ ವಹಿಸಿಕೊಂಡಾಗ ಕೇರವಲ 370 ಕೋಟಿ ರೂ. ದುಡಿಯುವ ಬಂಡವಾಳ ಇದೀಗ 14 ಸಾವಿರ ಕೋಟಿ ರೂ. ತಲುಪಿದೆ. ಇದಕ್ಕಾಗಿ ಯಾರೂ ಕನಿಷ್ಟ ಸೌಜನಕ್ಕೂ ಸನ್ಮಾನಿಸಲಿಲ್ಲ. ಹಾನಿಯಾದಾಗ ಅದಕ್ಕೆ ಟೀಕೆ ಮಾಡುವವರು ಇರುತ್ತಾರೆ. ಅದರೆ ಒಳ್ಳೆಯ ಕೆಲಸ ಮಾಡುವಾಗ ಟೀಕೆಗೆ ತಲೆಕೆಡಿಸಿಕೊಳ್ಳದೇ ಮುನ್ನಡೆಯಿರಿ ಎಂದು ಸಲಹೆ ನೀಡಿದರು.

ಆತ್ಮಸಾಕ್ಷಿಯಿಂದ ಕೆಲಸ ಮಾಡಿದರೆ ಭಗವಂತನಿಗೂ ಹೆದರುವ ಅವಶ್ಯಕತೆ ಇಲ್ಲ. ಐಸಿಐಸಿಐ ಬ್ಯಾಂಕ್ ಹಗರಣದಲ್ಲಿ ವಿಡಿಸಿಸಿ ಬ್ಯಾಂಕ್ ಹಣವೂ ಸೇರಿತ್ತು. ಆಗೆಲ್ಲ ನನಗೆ ಕಪ್ಪು ಚುಕ್ಕೆ ತರುವ ಕೆಲಸವೂ ನಡೆಯಿತು. ಆದರೆ ಕಾನೂನು ಹೋರಾಟದ ಮೂಲಕ ಹಣವನ್ನು ಮರಳಿ ಪಡೆದಿದ್ದೇನೆ ಎಂದು ವಿವರಿಸಿದರು.

ಸಹಕಾರಿ ವ್ಯವಸ್ಥೆಯಲ್ಲಿ ಆಡಳಿತ ನಿರ್ವಹಣೆ ಕೊರತೆಯಿಂದ ಅಮಾನತ್ ಸಹಕಾರಿ ಸೇರಿದಂತೆ ಅನೇಕ ಬ್ಯಾಂಕುಗಳು ಅಸ್ತಿತ್ವ ಕಳೆದುಕೊಂಡಿವೆ, ಆದರೆ ಅನೇಕ ತೊಂದರೆ ಎದುರಿಸಿಯೂ, ಆರ್ಥಿಕ ಹಿನ್ನಡೆಯನ್ನೆಲ್ಲ ಮೀರಿ ಶ್ರೀ ಸಿದ್ದೇಶ್ವರ ಬ್ಯಾಂಕ್ ಪ್ರಗತಿಯತ್ತ ಮುನ್ನಡೆದಿದೆ. ಹೀಗಾಗಿ ಹಾಲಿ ತಂಡವನ್ನೇ ಗೆಲ್ಲಿಸಿ ಎಂದು ಮನವಿ ಮಾಡಿದರು.

ಸಹಕಾರ ಚಳವಳಿ ಜನ್ಮ ತಾಳಿದ್ದು ಧಾರವಾಡ ಜಿಲ್ಲೆಯಲ್ಲಾದರೂ, ಚಳವಳಿ ಬೆಳೆದು, ಅಭಿವೃದ್ಧಿ ಕಂಡದ್ದು ಅವಿಭಜಿತ ವಿಜಯಪುರ ಜಿಲ್ಲೆಯಲ್ಲಿ ಎಂಬುದು ನಮಗೆಲ್ಲ ಹೆಮ್ಮೆಯ ಸಂಗತಿ ಎಂದರು.

ಹಾಲಿ ತಂಡದ ಎಲ್ಲ ಸ್ಪರ್ಧಿಗಳ ಗೆಲುವಿಗೆ ಮತಯಾಚಿಸಬೇಕು. ಬದಲಾಗಿ ಯಾರೂ ವೈಯಕ್ತಿಕ ಗೆಲುವು ಮಾತ್ರ ಶ್ರಮಿಸಬೇಡಿ. ಹೀಗಾದಲ್ಲಿ ಸಿದ್ದೇಶ್ವರ ಸಹಕಾರಿ ಬ್ಯಾಂಕ್ನ್ನು ಸದೃಢವಾಗಿ ಕಟ್ಟಲಾಗದು ಎಂದು ಕಿವಿ ಮಾತು ಹೇಳಿದರು.

ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ

ಸಿದ್ಧೇಶ್ವರ ಸಹಕಾರಿ ಬ್ಯಾಂಕ್ , ಬಿ.ಎಲ್ಡಿ.ಇ., ವಿಡಿಸಿಸಿ ಬ್ಯಾಂಕ್ ಸೇರಿದಂತೆ ಹಲವು ಸಂಘ ಸಂಸ್ಥೆಗಳನ್ನು ಕಟ್ಟಿ ಬೆಳೆಸುವಲ್ಲಿ ವಚನ ಪಿತಾಮಹ

ಡಾ.ಹಳಕಟ್ಟಿ ಅವರ ದೂರದೃಷ್ಟಿಯೇ ಕಾರಣ. ಹೀಗಾಗಿ ಇಂಥ ಮಹನೀಯರ ಕನಸು ಸಾಕಾರಾಗೊಳಿಸುವ ಜವಾಬ್ದಾರಿ ನಮ್ಮ ನಿಮ್ಮೆಲ್ಲರ ಮೇಲಿದೆ ಎಂದರು.

ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ ಮಾತನಾಡಿ,

ಪ್ರತಿಷ್ಠಿತ ಶ್ರೀ ಸಿದ್ದೇಶ್ವರ ಬ್ಯಾಂಕ್ ಸದಸ್ಯತ್ವ ಪಡೆಯಲು ಅನೇಕರು ಶಿಫಾರಸ್ಸು ಪಡೆದುಕೊಳ್ಳುತ್ತಿದ್ದರು, ಈ ಹಿಂದೆ ಸೂಪರ್ ಸೀಡ್ ಆಗಿದ್ದ ಸಂದರ್ಭದಲ್ಲಿ ಠೇವಣಿ ಮುಳುಗಿ ಹೋಯಿತು ಎಂದು ಅನೇಕರು ಅಪಪ್ರಚಾರ ಮಾಡಿದರು. ಆದರೆ ಅಂಥ ಸಮಸ್ಯೆ, ಸವಾಲುಗಳನ್ನೆಲ್ಲ ಎದುರಿಸಿ ಮುನ್ನಡೆದಿದೆ, ಈ ಬ್ಯಾಂಕ್ ಅಜರಾಮರ ಹಾಗೂ ಎಲ್ಲ ಬ್ಯಾಂಕುಗಳಲ್ಲಿ ಶ್ರೀ ಸಿದ್ದೇಶ್ವರ ಬ್ಯಾಂಕ್ ಹಿರಿಯಣ್ಣನಂತೆ ಮುನ್ನಡೆಯುತ್ತಿರುವುದು ಹೆಮ್ಮೆಯ ಸಂಗತಿ ಎಂದರು.

ಜಿಲ್ಲೆಯ ವ್ಯಾಪಾರಸ್ಥರ ಆರ್ಥಿಕ ಜೀವನಾಡಿಯಾಗಿರುವ ಶ್ರೀ ಸಿದ್ದೇಶ್ವರ ಬ್ಯಾಂಕ್ ಈ ಹಿಂದೆ ಅನೇಕ ಅಡೆತಡೆ ಎದುರಿಸಿದರೂ ಅವುಗಳನ್ನು ಸಮರ್ಥವಾಗಿ ಎದುರಿಸಿ ಫೈನಾನ್ಸ್, ವಿವಿಧ ಆರ್ಥಿಕ

ಸಂಸ್ಥೆಗಳಿಗೆ ಉತ್ತಮ ಸ್ಪರ್ಧೆ ನೀಡುತ್ತಿದೆ ಎಂದರು.

ಷೆಡ್ಯೂಲ್ಡ್ ಬ್ಯಾಂಕ್ ಆಗಿಸುವ ಸಂಕಲ್ಪ

ಸಹಕಾರಧುರೀಣಹಾಗೂಶ್ರೀಸಿದ್ದೇಶ್ವರಬ್ಯಾಂಕ್ ನಿರ್ದೇಶಕ ಸ್ಥಾನಕ್ಕೆ ಸ್ಪರ್ಧಿಸಿರುವ ರಮೇಶ ಬಿದನೂರ ಮಾತನಾಡಿ, ಎಲ್ಲರ ಆಶೀರ್ವಾದ ಬಲದಿಂದ ಉತ್ತರ ಕರ್ನಾಟಕ ಭಾಗದ ಪ್ರತಿಷ್ಠಿತ ಸಿದ್ದೇಶ್ವರ ಬ್ಯಾಂಕ್ ಅನ್ನು ಷೆಡ್ಯೂಲ್ಡ್ ಬ್ಯಾಂಕ್ ಆಗಿಸುವ ಸಂಕಲ್ಪ ಈಡೇರಿಸಲು ದುಡಿಯುವ ಬಂಡವಾಳವನ್ನು ಒಂದು ಸಾವಿರ ಕೋಟಿ ರೂ. ಏರಿಕೆ ಮಾಡುವ ನಿಟ್ಟಿನಲ್ಲಿ ಶ್ರಮಿಸಲಾಗುವುದು, ಹಾಲಿ ಇರುವ ಪೆನಲ್ ನಿರ್ದೇಶಕರನ್ನೇ ಮರು ಆಯ್ಕೆ ಮಾಡಿ ಮತ್ತೊಮ್ಮೆ ಸೇವೆ ಅವಕಾಶ ನೀಡಬೇಕು ಎಂದರು.

ಕಲಬುರ್ಗಿ, ಬೆಳಗಾವಿ ಸೇರಿದಂತೆ ಹೊರ ಜಿಲ್ಲೆಗಳಲ್ಲೂ ಸಹ ಶಾಖೆ ಆರಂಭಿಸುವ ಗುರಿ ಹೊಂದಲಾಗಿದೆ ಎಂದರು. 2022 ರಿಂದ ನಷ್ಟದಿಂದ ಹೊರಬಂದು ಲಾಭದತ್ತ ಮುನ್ನಡೆದಿರುವ ಶ್ರೀ ಸಿದ್ದೇಶ್ವರ ಬ್ಯಾಂಕ್ ಕೋವಿಡ್ ಸಂದರ್ಭದಲ್ಲಿ ಸಾಲ ವಸೂಲಾತಿ ಕಷ್ಟದ ಸಮಯದಲ್ಲೂ ಉತ್ತಮ ಲಾಭ ಗಳಿಸಿದೆ, ಪ್ರಸ್ತುತ 3.14 ಕೋಟಿ ರೂ.ಲಾಭ ಗಳಿಸಿದ್ದು ಎನ್.ಪಿ.ಎ. ಪ್ರಮಾಣ ಶೇ.1.98 ಎನ್.ಪಿ.ಎ. ಸೀಮಿತವಾಗಿರುವುದು ಮಹತ್ವದ ದಾಖಲೆ ಎಂದರು.

ವೀರಶೈವ ಮಹಾಸಭಾ ಜಿಲ್ಲಾಧ್ಯಕ್ಷರಾದ ವಿ.ಸಿ. ನಾಗಠಾಣಾ, ಸಹಕಾರಿ ಧುರೀಣರಾದ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾದ ಮಲ್ಲಿಕಾರ್ಜುನ ಲೋಣಿ, ಬಿಜೆಪಿ ಜಿಲ್ಲಾಧ್ಯಕ್ಷ ಗುರುಲಿಂಗಪ್ಪ ಅಂಗಡಿ, ಚಂದ್ರಶೇಖರ ಕವಟಗಿ,

ಸುರೇಶ ಗಚ್ಚಿನಕಟ್ಟಿ, ಶ್ರೀಕಾಂತ ಶಿರಾಡೋಣ, ರಾಜಶೇಖರ ಮಗಿಮಠ, ಶ್ರೀ ಹರ್ಷಗೌಡ ಪಾಟೀಲ, ಈರಣ್ಣ ಪಟ್ಟಣಶೆಟ್ಟಿ, ರವೀಂದ್ರ ಬಿಜ್ಜರಗಿ, ಪ್ರಕಾಶ ಬಗಲಿ, ಗುರು ಗಚ್ಚಿನಮಠ, ವೈಜನಾಥ ಕರ್ಪೂರಮಠ, ಭೌರಮ್ಮ ಗೊಬ್ಬೂರ, ರಮೇಶ ಬಿದನೂರು ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಓತಿಹಾಳ ಪರಿಶಿಷ್ಟರ ಕಾಲೊನಿಗೆ ನುಗ್ಗುವ ನೀರು



**ಸಿಂದಗಿ :** ತಾಲ್ಲೂಕಿನ ಓತಿಹಾಳ ಗ್ರಾಮದಲ್ಲಿ ಪರಿಶಿಷ್ಟ ಕಾಲೊನಿಗೆ ಗ್ರಾಮದ ತ್ಯಾಜ್ಯ ನೀರು, ಹಳ್ಳದ ನೀರು ಮನೆಗಳಿಗೆ ನುಗ್ಗಿ ತೊಂದರೆಯಾಗುತ್ತಿದೆ ಎಂದು ಆಗ್ರಹಿಸಿ ಅಲ್ಲಿನ ನಿವಾಸಿಗಳು ಪಟ್ಟಣದ ತಾಲ್ಲೂಕು ಪ್ರಜಾಸೌಧಕ್ಕೆಬಂದುತಹಶೀಲ್ದಾರ್‌ಕಾರ್ಯಾಲಯಕ್ಕೆ ಶುಕ್ರವಾರ ನುಗ್ಗಿ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ನಿವಾಸಿ ಏಕನಾಥ ದೋಶ್ಯಾಳ ಮಾತನಾಡಿ, ಮಳೆಯಿಂದಾಗಿ ಜಮೀನು, ಹಳ್ಳಕ್ಕೆ ಬರುವ ನೀರು, ಗ್ರಾಮದ ಬಹುತೇಕ ತ್ಯಾಜ್ಯ ನೀರು ಪರಿಶಿಷ್ಟ ಕಾಲೊನಿಗೆ ಹರಿದು ಬಂದು ಮನೆಗಳಿಗೆ ನುಗ್ಗುವುದಲ್ಲದೇ ರಸ್ತೆಯಲ್ಲಿ ಕೊಳಚೆ ನೀರು ಸಂಗ್ರಹಗೊಂಡು ಸಂಚಾರಕ್ಕೆ ತುಂಬಾ ತೊಂದರೆ-ಯಾಗುತ್ತಿದೆ. ತ್ಯಾಜ್ಯ ನೀರಿನಿಂದ ಮಕ್ಕಳು, ವೃದ್ಧರ ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಬೀರುತ್ತಿದೆ ಎಂದರು.

ಹಲವಾರು ವರ್ಷಗಳಿಂದ ಗ್ರಾಮ ಪಂಚಾಯಿತಿ ಕಾರ್ಯಾಲಯಕ್ಕೆ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದರು. ಎರಡು ದಿನಗಳಲ್ಲಿ ಗ್ರಾಮಕ್ಕೆ ಭೇಟಿ ನೀಡಿ ಶಾಶ್ವತ ಪರಿಹಾರ ದೊರಕಿಸಿಕೊಡುವ ದಿಸೆಯಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ತಹಶೀಲ್ದಾರ್ ಕರೆಪ್ಪ ಬೆಳ್ಳಿ ಪ್ರತಿಭಟನಾಕಾರರಿಗೆ ಭರವಸೆ ನೀಡಿದ ಹಿನ್ನೆಲೆಯಲ್ಲಿ ಪ್ರತಿಭಟನೆ ಕೈ ಬಿಡಲಾಗಿದೆ ಎಂದು ತಿಳಿಸಿದ್ದಾರೆ. ಕೇಶಪ್ಪ ಮಣಗಾಪುರ, ರಾಜೂ ವಠಾರ, ಸಿದ್ದು ವಠಾರ, ವಿಜಯ ಕಡಕೋಳ, ಮೋನೇಶ ಕತ್ನಳ್ಳಿ, ಪುತಳವ್ವ ವಠಾರ, ಯಲ್ಲವ್ವ ಮಾದರ, ಮಲ್ಲಮ್ಮ ಬೂದಿಹಾಳ, ಸರಸ್ವತಿ ಕತ್ನಳ್ಳಿ, ಸುಮಂಗಲಾ ಬೂದಿಹಾಳ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಜಾತ್ರಾ ಕಮಿಟಿ ಸದಸ್ಯರಿಗೆ ಸನ್ಮಾನ



**ದೇವರಹಿಪ್ಪರಗಿ :** ರಾವುತರಾಯ ಮಲ್ಲಯ್ಯ ಜಾತ್ರಾ ಮಹೋತ್ಸವಕ್ಕೆ ಸಹಕಾರ ನೀಡಿದ ಕಮಿಟಿ ಸದಸ್ಯರು ಹಾಗೂ ಪೊಲೀಸ್ ಸಿಬ್ಬಂದಿಯನ್ನು ಸನ್ಮಾನಿಸುವ ಕಾರ್ಯ ಶ್ಲಾಘನೀಯ ಎಂದು ವಿಜಯಪುರ ಅನುಗ್ರಹ ಆಸ್ಪತ್ರೆಯ ಡಾ. ಪ್ರಭುಗೌಡ ಲಿಂಗದಳ್ಳಿ (ಚಬನೂರ) ಹೇಳಿದರು.

ಪಟ್ಟಣದ ಮಲ್ಲಯ್ಯ ದೇವಸ್ಥಾನದ ಆವರಣದಲ್ಲಿ ಉದ್ದಿಮೆದಾರ ಕಾಶೀನಾಥ ಸಾಲಕ್ಕಿ ಹಾಗೂ ಕೆ.ಎಸ್. ಕೋರಿ ಹಮ್ಮಿಕೊಂಡ ಜಾತ್ರಾ ಕಮಿಟಿ ಸದಸ್ಯರ ಸನ್ಮಾನ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದರು.

ದೇವಸ್ಥಾನದ ಅಭಿವೃದ್ಧಿ ಸಹಿತ ಜಾತ್ರೆಯ ಅಂಗವಾಗಿ ಯೋಜನೆ ರೂಪಿಸಿ ಯಾವುದೇ ಅವಘಡಗಳಿಗೆ ಅವಕಾಶ ನೀಡದೇ ಯಶಸ್ವಿಗೊಳಿಸಿದ ಸಮಿತಿಯ ಕಾರ್ಯವನ್ನು ಗುರುತಿಸಿ, ಪ್ರೇರಣಾದಾಯಕವಾಗಿ ಅಭಿನಂದಿಸುತ್ತಿರುವ ಸಾಲಕ್ಕಿ ಹಾಗೂ ಕೋರಿ ಅವರ ಕಾರ್ಯ ಉತ್ತಮ ಎಂದರು.

ನಿವೃತ್ತ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಸಿ.ಕೆ. ಕುದರಿ, ಚೈತನ್ಯ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಗುರುರಾಜ ಕುಲಕರ್ಣಿ ಹಾಗೂ ಸನ್ಮಾನಿತರಾದ ಕಮಿಟಿಯ ಖಜಾಂಚಿ ಕಾಶೀನಾಥ ತಳಕೇರಿ, ಸದಸ್ಯ ಪ್ರಕಾಶ ಮಲ್ಲಾರಿ, ಉಪಾಧ್ಯಕ್ಷ ಶ್ರೀಧರ ನಾಡಗೌಡ ಅಧ್ಯಕ್ಷ ವಿನೋದಗೌಡ ಪಾಟೀಲ ಮಾತನಾಡಿದರು. ಇದೇ ಸಂದರ್ಭದಲ್ಲಿ ಕಮಿಟಿಯ 28 ಜನ ಸದಸ್ಯರನ್ನು ಸನ್ಮಾನಿಸಲಾಯಿತು.

ಪಿಎಸ್‌ಐ ಸಚೀನ ಆಲಮೇಲಕರ, ಕಾಸುಗೌಡ ಬಿರಾದಾರ(ಜಲಕತ್ತಿ), ಪಿ.ಎಸ್.ಮಿಂಚನಾಳ, ಬಾಬುಗೌಡ ಪಾಟೀಲ, ಯಲಗೂರೇಶ ದೇವೂರ, ಗುಂಡು ಕೋರಿ, ಸಂಗಪ್ಪಣ್ಣ ತಡವಲ್, ಮಲ್ಲು ಕೋರಿ, ಶಿವನಗೌಡ ಪಾಟೀಲ, ಸಿದ್ಧನಗೌಡ ಪಾಟೀಲ ಹಾಗೂ ಕಮಿಟಿಯ ಸದಸ್ಯರು ಇದ್ದರು.

## ಪದ್ಮವಿಭೂಷಣ ಡಾ. ಗಂಗೂಬಾಯಿ ಹಾನಗಲ್ ಜನಿಸಿದ ಮನೆ ಜೀರ್ಣೋದ್ಧಾರಕ್ಕಾಗಿ ಸಿಎಂಗೆ ಶಾಸಕ ಯತ್ನಾಳ ಪತ್ರ

**ವಿಜಯಪುರ :** ಹಿಂದೂಸ್ತಾನಿ ಸಂಗೀತದ ಮೇರು ಗಾಯಕರಾದ ಪದ್ಮವಿಭೂಷಣ ಡಾ.ಗಂಗೂಬಾಯಿ ಹಾನಗಲ್ ಅವರು ಜನಿಸಿದ ಮನೆಯನ್ನು ಸಂಪೂರ್ಣವಾಗಿ ಜೀರ್ಣೋದ್ಧಾರ ಮಾಡುವಂತೆ ಒತ್ತಾಯಿಸಿ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ ರವರು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಶುಕ್ರವಾರ ಪತ್ರ ಬರೆದಿದ್ದಾರೆ.

ಡಾ.ಗಂಗೂಬಾಯಿ ಹಾನಗಲ್ ಅವರ ಗೌರವಾರ್ಥವಾಗಿ ಧಾರವಾಡ ನಗರದಲ್ಲಿ ನಿರ್ಮಾಣವಾಗಿದ್ದ ಸ್ಮಾರಕ, ಗಂಗೋತ್ರಿ ಹೆಸರಿನ ವಸ್ತು ಸಂಗ್ರಹಾಲಯ ಹಾಗೂ ಸಂಗೀತ ಶಾಲೆ ಸಂಪೂರ್ಣವಾಗಿ ಶಿಥಿಲಗೊಂಡಿದೆ. ಸದರಿ ಸ್ಮಾರಕ ಕಟ್ಟಡವು ಹತ್ತೇ ವರ್ಷದಲ್ಲಿ ಪಾಳು ಬಿದ್ದಿರುವುದು ಸರ್ಕಾರದ ನಿರ್ಲಕ್ಷ್ಯಕ್ಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಸಡ್ಡೆಗೆ ಹಿಡಿದ ಕೈಗನ್ನಡಿ.



ಸಂಗೀತ ಕ್ಷೇತ್ರದ ಬೆಳವಣಿಗೆಗೆ ತಮ್ಮ ಜೀವನದುದ್ದಕ್ಕೂ ಸೇವೆಯನ್ನು ಸಲ್ಲಿಸಿ, ನಮ್ಮ ನಾಡು ಹಾಗೂ ದೇಶದ ಕೀರ್ತಿಯನ್ನು ವಿಶ್ವವ್ಯಾಪಿ ಪಸರಿಸುವಂತೆ ಮಾಡಿದ ಸಂಗೀತದಿಗ್ಗಜೆಗಂಗೂಬಾಯಿ ಅವರು ಜನಿಸಿದ ಮನೆಯನ್ನು ಸಂಪೂರ್ಣವಾಗಿ ನವೀಕರಿಸಿ ಅವರಿಗೆ ಗೌರವ ಸಲ್ಲಿಸಬೇಕಾದದ್ದು ಸರ್ಕಾರದ ಕರ್ತವ್ಯ. ಅವರು ಜನಿಸಿದ ಮನೆಯ ಜಾಗದಲ್ಲಿ ಸರ್ಕಾರ ಸ್ಮಾರಕವನ್ನು ನಿರ್ಮಿಸಬೇಕು, ಇದೆ ಜಾಗದಲ್ಲಿ ಅವರ ಪ್ರತಿಮೆಯನ್ನು ಅನಾವರಣ ಮಾಡಬೇಕು. ಮುಂದಿನ ಪೀಳಿಗೆಗೆ ಗಾಯನಗಂಗೆ ವಿಧುಷಿ ಡಾ. ಗಂಗೂಬಾಯಿ ಹಾನಗಲ್ ರವರು ಮೇರುವ್ಯಕ್ತಿತ್ವವಾಗಿ ಪರಿಚಯವಾಗಬೇಕು. ಈ ನಿಟ್ಟಿನಲ್ಲಿ ಸರ್ಕಾರವು ಶತಮಾನದ ಇತಿಹಾಸವುಳ್ಳ ಡಾ. ಗಂಗೂಬಾಯಿ ಹಾನಗಲ್ ಅವರ ಮನೆಯನ್ನು ಸಂಪೂರ್ಣವಾಗಿ ಜೀರ್ಣೋದ್ಧಾರ ಮಾಡಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ

## ವೈದ್ಯಕೀಯ ಕಾಲೇಜು ಸ್ಥಾಪನೆಗೆ ಆಗ್ರಹಿಸಿ ಬೃಹತ್ ಪ್ರತಿಭಟನೆ

**ಬಸವನಬಾಗೇವಾಡಿ :** ವಿಜಯಪುರ ಪಟ್ಟಣದಲ್ಲಿ ಸರ್ಕಾರಿ ವೇದಿಕೆಯ ಕಾಲೇಜ್ ಸ್ಥಾಪನೆ ಆಗಬೇಕೆಂದು ಅಗ್ರಹಿಸಿದ ತಾಲೂಕಿನ ವಿವಿಧ ಸಂಘಟನೆ ಆಶ್ರಯದಲ್ಲಿ ಶುಕ್ರವಾರ ಬೃಹ ಪ್ರತಿಭಟನೆ ನಡೆಯಿತು ಪ್ರತಿಭಟನೆಯು ಪಟ್ಟಣದ ಶ್ರೀ ಬಸವೇಶ್ವರ ದೇವಸ್ಥಾನದಿಂದ ಪ್ರಾರಂಭವಾಗಿ ಬಸವೇಶ್ವರ ವೃತ್ತದ ಮೂಲಕ ಬಸ್ ನಿಲ್ದಾಣ ರಸ್ತೆಯ ಮಾರ್ಗವಾಗಿ ಮಿನಿ ವಿಧಾನಸೌಧ ತಲುಪಿತು ಸರಕಾರದ ಮಟ್ಟದಲ್ಲಿ ಪಿಪಿಪಿ ಮಾದರಿಯಲ್ಲಿ ವೈದ್ಯಕೀಯ ಕಾಲೇಜು ಸ್ಥಾಪನೆ ಮಾಡಬೇಕೆಂದು ಹುನ್ನಾರ ನಡೆದಿದೆ ಜಿಲ್ಲೆಯಲ್ಲಿ ಶಾಸಕರು ಒಬ್ಬರು ಬಂಡವಾಳವಾಗಿ ಹೂಡುವುದಾಗಿ ಭರವಸೆ ನೀಡಿದ್ದಾರೆ ಇದು ಸಲ್ಲದ ಎಂದು ಪ್ರತಿಭಟನಾಕಾರರು ಪಿಪಿಪಿ ಮಾದರಿಯ ವೈದ್ಯಕೀಯ ಕಾಲೇಜು ಸ್ಥಾಪನೆ ಮಾತ್ರ ಬೇಡ ಎಂದು ಆಕ್ರೋಶ ವ್ಯಕ್ತಪಡಿಸಿದರು




ವಿಜಯಪುರ ನಗರದಲ್ಲಿ ಸರ್ಕಾರಿ ಆಸ್ಪತ್ರೆ ಸರಿಯಾಗಿ ನಡೆದಿದೆ ಅಲ್ಲಿ ಸಾಕಷ್ಟು ಸ್ಥಳವಿದೆ ಅಲ್ಲಿಯೇ ಸರಕಾರಿ ವೇದಿಕೆಯ ಕಾರ್ಯ ಸ್ಥಾಪನೆ ಮಾಡಬೇಕು ಇದು ಬಡವರ ಪಾಲಿಗೆ ಆಶಾಕಿರಣವಾಗಲಿದೆ ಎಂದು ಸರಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆ ಹೋರಾಟ ಸಮಿತಿ ಸದಸ್ಯ ಅರವಿಂದ ಕುಲಕರ್ಣಿ ಆಗ್ರಹಿಸಿದರು ಪ್ರತಿಭಟನೆ ನೇತೃತ್ವವನ್ನು ವಿವಿಧ ಸಂಘಟನೆಯ ಮುಖಂಡರು ರಾಜಶೇಖರ್ ಹುಲ್ಲೂರ್ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆ ಹೋರಾಟ ಸಮಿತಿ ಬಸವನಬಾಗೇವಾಡಿ ಭಾರತೀಯ ಹೋರಾಟ ಸಮಿತಿ ಸದಸ್ಯರು ಬಸವನ ಬಾಗೇವಾಡಿ ಟೀನಾ ಕ್ಷ ವಿಯರ್ ಜನ ಆರೋಗ್ಯ ಚಳುವಳಿ ಉತ್ತರ ಕರ್ನಾಟಕ ಸಂಚಾಲಕರು ರೂಪಾ ವಾಲಿಕಾರ್ ಅಧ್ಯಕ್ಷರು ಸ್ನೇಹ ಶಕ್ತಿ ಗ್ರಾಮೀಣ ಮಹಿಳಾ ಸ್ವಸಹಾಯ ಸಂಘಗಳ ಭಗವಾನ್ ರೆಡ್ಡಿ ವೈದ್ಯಕೀಯ ಕಾಲೇಜು ಹೋರಾಟ ಸಮಿತಿಯ ಜಿಲ್ಲಾ ಮುಖಂಡರು ಅರವಿಂದ್ ಕುಲಕರ್ಣಿ ವೈದ್ಯಕೀಯ ಕಾಲೇಜು ಹೋರಾಟ ಸಮಿತಿಯ ಸದಸ್ಯರು ಪರಶುರಾಮ್ ದಿಂಡವಾರ ಡಿಎಸ್ ಎಸ್ ಜಿಲ್ಲಾ ಸಂಚಾಲಕರು ಲಲಿತಾ ಬಿಜ್ಜರಗಿ ಮಹಿಳಾ ಮುಖಂಡರು ಮಾಂತೇಶ್ ಚಕ್ರವರ್ತಿ ಕರ್ವೆ ಮುಖಂಡರು ಅಶೋಕ್ ಹಾರಿವಾಳ ಕರವೇ ರಾಜ್ಯ ಕಾರ್ಯದರ್ಶಿ ಚಂದ್ರಶೇಖರ್ ನಾಲತವಾಡ ಡಿಎಸ್ ಎಸ್ ತಾಲೂಕ ಸಂಚಾಲಕರು ಗಂಗಾಧರ್ ಆರ್ಯರ್, ಡಿಎಸ್ ಎಸ್ ವಿದ್ಯಾರ್ಥಿ ಒಕ್ಕೂಟ ಸಂಚಾಲಕರು ಗಂಗವ್ವ ಕುದುರಿ ಜೀವನ ಜ್ಯೋತಿ ಮಾಜಿ ದೇವದಾಸಿ ಯಮನೂರಿ ಚಲವಾದಿ ಡಿಎಸ್ ಎಸ್ ತಾಲೂಕ ಸಂಚಾಲಕರು ಕಾಜಂಬರ್ ನದಾಫ್ ಟಿಪ್ಪು ಸುಲ್ತಾನ್ ಕ್ರಾಂತಿ ರಾಜ್ಯ ಯುವ ಘಟಕದ ಅಧ್ಯಕ್ಷರು ಅನೇಕರ್ ಭಾಗವಹಿಸಿದ್ದರು

## ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ

**ವಿಜಯಪುರ :** ನಗರದ ಪ್ರತಿಷ್ಠಿತ ಬಿ.ಎಲ್.ಡಿ.ಇ. ಸಂಸ್ಥೆಯ ಜ್ಞಾನಯೋಗಿ ಶ್ರೀ ಸಿದ್ದೇಶ್ವರ ಸ್ವಾಮೀಜಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಮತ್ತು ಸಚಿವ ಎಂ. ಬಿ. ಪಾಟೀಲ ಅವರ ಜನ್ಮದಿನ ಆಚರಿಸಲಾಯಿತು.

ಮಂಗಳವಾರ ನಡೆದ ಕಾರ್ಯಕ್ರಮದಲ್ಲಿ ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು.

ಇದೇ ವೇಳೆ ಬಿ.ಎಲ್.ಡಿ.ಇ ಸಂಸ್ಥೆಯ ಅಧ್ಯಕ್ಷ ಮತ್ತು ಸಚಿವ ಎಂ. ಬಿ. ಪಾಟೀಲ ಅವರ ಜನ್ಮದಿನವನ್ನು ಸಸಿ ವಿತರಿಸಯವ



ಮೂಲಕ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಡಾ. ಬಿ. ಎಸ್. ಹಿರೇಮಠ, ಮಹರ್ಷಿ ವಾಲ್ಮೀಕಿ ಅವರು ಕಾಡಿನಲ್ಲಿದ್ದುಕೊಂಡು ಮನುಕುಲದ ಹಿತಕ್ಕಾಗಿ ಜೀವನ ಸಾಗಿಸಿದವರು. ಸಚಿವ ಡಾ. ಎಂ. ಬಿ. ಪಾಟೀಲ ಅವರು ಕೋಟಿ ವೃಕ್ಷ ಅಭಿಯಾನದ ಮೂಲಕ ಜಿಲ್ಲೆಯಲ್ಲಿ ಅರಣ್ಯವನ್ನು ನಿರ್ಮಿಸಿ ಮನುಕುಲಕ್ಕೆ ಆದರ್ಶರಾಗಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಚಾರ್ಯೆ ಡಾ. ಭಾರತಿ ವೈ. ಖಾಸನಿಸ, ಸಹಪ್ರಾಧ್ಯಾಪಕ ಡಾ. ಎಂ. ಎಸ್. ಹಿರೇಮಠ, ಪ್ರಶಿಕ್ಷಣಾರ್ಥಿ ವೈಷ್ಣವಿ ಹಡಪದ, ಬೋಧಕ ಹಾಗೂ ಬೋಧಕರ ಹೊರತಾದ ಸಿಬ್ಬಂದಿ ಉಪಸ್ಥಿತರಿದ್ದರು.

## ಆತ್ಮಾವಲೋಕನಕ್ಕೆ ವಚನಗಳು ಮೂಲ ಮಂತ್ರಗಳಾಗಿವೆ: ಡಾ. ಸಂಜಯ್ ಶಿಂಧಿ ಹಟ್ಟಿ

**ಮೂಡಲಗಿ :** ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಜ್ಞಾನದೀಪ್ತಿ ಫೌಂಡೇಶನ್, ಮೂಡಲಗಿ ಇವುಗಳ ಸಹಯೋಗದಲ್ಲಿ ಪಟ್ಟಣದ ಶ್ರೀ ಸತ್ಯಸಾಯಿ ಮಂದಿರದಲ್ಲಿ 43 ನೆ ಬೆಳದಿಂಗಳ ಸಾಹಿತ್ಯ ಚಿಂತನ ಮಂಥನ ಕಾರ್ಯ ಕ್ರಮ ಜರುಗಿತು.

ಕಾರ್ಯಕ್ರಮದ ದಿವ್ಯಸಾನಿದ್ಯಾವನ್ನು ವಹಿಸಿದ್ದಗೋಕಾಕಶೂನ್ಯಸಂಪಾದನಮಠದ ಶ್ರೀ ಮುರುಘರಾಜೇಂದ್ರ ಮಹಾಸ್ವಾಮಿಗಳು ಆಶೀರ್ವಚನ ನೀಡುತ್ತಾ, ಆಧ್ಯಾತ್ಮಿಕ ಜ್ಞಾನದ ಮಾರ್ಗವಾಗಿರುವ ಸತ್ಸಂಗದಿಂದ ಒಳ್ಳೆಯ ಚಿಂತನೆಗಳು ಮತ್ತು ಸದ್ಗುಣಗಳು ಬೆಳೆದು, ಜೀವನದ ಮೌಲ್ಯಗಳು ಮತ್ತು ಸತ್ಯದ ಅರಿವು ಮೂಡುತ್ತದೆ ಎಂದು ಹೇಳಿದರು.

ಈ ನಿಟ್ಟಿನಲ್ಲಿ ಕನ್ನಡ ಸಾಹಿತ್ಯ ಪರಿಷತ್ತು, ಮೂಡಲಗಿ ಘಟಕವು ವಿನುತನ ಕಾರ್ಯಕ್ರಮಗಳನ್ನುಹಮ್ಮಿಕೊಳ್ಳುತ್ತಿರುವದು ಶ್ಲಾಘನಿಯವೆಂದರು.



ಕಾರ್ಯಕ್ರಮದಲ್ಲಿ ಅನುಭಾವವನ್ನು ನೀಡಿದ ಕ ಸಾ ಪ ಅಧ್ಯಕ್ಷ, ಡಾ. ಸಂ-ಜಯ ಶಿಂದಿಹಟ್ಟಿಯವರು, ಶರಣ-ರ ವಚನಗಳಲ್ಲಿನ ಆತ್ಮವಿಮರ್ಶೆ ವಚನ ಸಾಹಿತ್ಯದ ಆತ್ಮವಿದ್ದಂತೆ, ಶರಣರು ಹೊರಗಿನ ಜಗತ್ತನ್ನು ಟಿಕೀಸುವುದಕ್ಕಿಂತ ಮೊದಲು ತಮ್ಮೊಳಗೆ ಇರುವ ಲೋಪ ದೋಷಗಳನ್ನು ಪರೀಕ್ಷಿಸಿಕೊಳ್ಳಲು ಹೆಚ್ಚಿನ ಮಹತ್ವ ನೀಡಬೇಕೆಂಬುವದನ್ನು ಬಸವಣ್ಣ, ಅಲ್ಲಮಪ್ರಭು, ಚೆನ್ನಬಸವಣ್ಣ, ಅಕ್ಕಮಹಾದೇವಿ ಹೀಗೆ ಮುಂತಾದ ಶರಣ-ರ ದೃಷ್ಟಿಕೋಣಗಳ ವಚನಗಳ ಮೂಲಕ ವಿವರಿಸಿದರು.

ಕಾರ್ಯಕ್ರಮದಲ್ಲಿ ಬಟಕುರ್ಕಿಯ ಶ್ರೀ ಬಸವಲಿಂಗ ಸ್ವಾಮೀಜಿ, ಶ್ರೀ ಹನುಮಂತ ಸೊರಗಾವಿ ವೇದಿಕೆಯಲ್ಲಿದ್ದರು. ಪ್ರವೀಣ ದೇಸುರಕರ, ವಿಜಯಲಕ್ಷ್ಮಿ ಬುದ್ನಿ ಅನ್ನಸಂತರ್ಪಣೆ ಸೇವೆ ಮಾಡಿದರು.

ಎ ಎಚ್ ವಂಟಗೋಡಿ, ಬಿ ವೈ ಶಿವಾಪುರ, ಬಿ ಆರ್ ತರಕಾರ, ಆರ್ ಟಿ ಲಂಕೇಪ್ಪನವರ, ವಿ ಎಸ್ ಹಂಚಿನಾಳ, ಸುಭಾಷ ಕುರಣೆ, ಶಿವಾನಂದಕಿತ್ತೂರು,ಸಂತೋಷಪಾಟೀಲ್, ಸಿದ್ರಾಮ ದ್ಯಾಗನಟ್ಟಿ, ಮಹಾದೇವ ಜಿಡ್ಡಿಮನಿ, ಸುಭಾಷ ಮಾವಿನಂದಿ, ಶಿವಾನಂದ ಕುಂಬಾರ, ಮಹೇಶ ಹಿರೇಮಠ್,ಭಾಗೀರಥಿ ಕುಳಲಿ,300 ಕ್ಕೂ ಹೆಚ್ಚು ಸಾಹಿತ್ಯಸಕ್ತರು ಹಾಗೂ ಶ್ರೀ ಸಾಯಿ ಸದ್ಭಕ್ತರು ಪಾಲ್ಗೊಂಡಿದ್ದರು.

ಮಾಧವಿ ಸೋನಾವಾಲ್ಕರ ಪ್ರಾರ್ಥ-ನೆ, ಪ್ರಶಾಂತ ಮಲ್ಲನಗೌಡರ ವಚನ ಗಾಯನ, ಸುರೇಶ ಲಂಕೇಪ್ಪನವರ ಪ್ರಾಸ್ತಾವಿಕ, ಮಹಾವೀರ ಸಲ್ಲಾಗೋಳ ನಿರೂಪಣೆ ಹಾಗೂ ಸಿ ಎಸ್ ಮೋಹಿತೆ ವಂದನಾರ್ಪಣೆಯನ್ನು ನಿರ್ವಹಿಸಿದರು.

## ಸಮೀಕ್ಷೆ ಮರು ಕಾರ್ಯಕ್ಕೆ ಶಿಕ್ಷಕರ ಹಿಂದೇಟು



**ದಾವಣಗೆರೆ:** ಕರ್ನಾಟಕ ರಾಜ್ಯದ ನಾಗರೀಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಸಮೀಕ್ಷೆ ಮರುಕಾರ್ಯ ನಿರ್ವಹಿಸಲು ಶಿಕ್ಷಕರು ಹಿಂದೇಟು ಹಾಕಿ ಅಸಮಾಧಾನ ಹೊರ ಹಾಕುವ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಕೆ ಮಾಡಿದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಸಮಿತಿಯ ನೇತೃತ್ವದಲ್ಲಿನಗರದ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗ ಜಮಾಯಿಸಿದ ಶಿಕ್ಷಕರುಜಿಲ್ಲಾಧಿಕಾರಿಗಳಮೂಲಕ ಸರ್ಕಾರಕ್ಕೆ ಮನವಿಯನ್ನು ಸಲ್ಲಿಕೆ ಮಾಡಿದರು.

ಕರ್ನಾಟಕ ರಾಜ್ಯದ ನಾಗರೀಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಸಮೀಕ್ಷೆ ಕಾರ್ಯ ದಿನಾಂಕ 22.09.2025 ರಿಂದ 07.10.2025ಕ್ಕೆ ಅಂತಿಮಗೊಂಡಿದ್ದರೂ ದಿನಾಂಕ 18.10.2025ರ ವರೆಗೆ ವಿಸ್ತರಿಸಲಾಗಿರುತ್ತದೆ.

ಆದರೆಪ್ರಸ್ತುತ0-6ವರ್ಷದಮಕ್ಕಳ ಸಮೀಕ್ಷೆಯನ್ನು ಮಾಡಬೇಕೆಂದು ಗಣತಿ ಮೇಲ್ವಿಚಾರಕರು ಹೇಳುತ್ತಿರುವುದು ಸರಿಯಷ್ಟೆ, ಸದರಿ ಸಮೀಕ್ಷೆಯನ್ನು ಮಾಡುವಾಗ ಸಾರ್ವಜನಿಕರಿಂದ ಆಗಿರುವ ನಿಂದನೆ, ಅವಮಾನ ಹಲವಾರು ತೊಂದರೆಗಳ ಬಗ್ಗೆ ಮತ್ತು ಮೇಲ್ವಿಚಾರಕರು ನಿಯಮ ಮೀರಿ ಒತ್ತಡ ಹಾಕುತ್ತಿರಿವ ವಿಚಾರವಾಗಿ ಉಲ್ಲೇಖಿತ ಸಭೆಯಲ್ಲಿ ಒಕ್ಕೊರಲಿನಿಂದ ಚರ್ಚಿಸಲಾಗಿ ಮರುಸಮೀಕ್ಷೆ ಕಾರ್ಯವನ್ನು ನಿರ್ವಹಿಸದಿರಲು ತೀರ್ಮಾನಿಸಲಾಗಿದೆ ಕೂಡಲೆ ಸರ್ಕಾರ ನಮ್ಮ ಬೇಡಿಕೆಗಳನ್ನು ಈಡೇರಿಸುವಂತೆ ಮನವಿ ಮಾಡಿದರು.

ನಾವುಗಳು ಸರ್ಕಾರದ ಆದೇಶದಂತೆ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಸಮೀಕ್ಷೆ ಕಾರ್ಯವನ್ನು ಮಾಡಿರುತ್ತೇವೆ. ಪ್ರಯುಕ್ತ 13.10.2025 ರಿಂದ ಸಮೀಕ್ಷೆ ಮರುಕಾರ್ಯನ್ನು ನಿರ್ವಹಿಸುವುದಿಲ್ಲ ಎಂಬ ಅಂಶವನ್ನು ತಮ್ಮ ಗಮನಕ್ಕೆ ತರಬಯಸುತ್ತೇವೆ.

ಸಮೀಕ್ಷೆದಾರರ ಮತ್ತು ಸಂಘದ ಮನವಿಗೆ ತಾವುಗಳು ಸಕಾರಾತ್ಮಕವಾಗಿ ಸ್ಪಂದಿಸಬೇಕೆಂದು ದಾವಣಗೆರೆ ಜಿಲ್ಲೆಯ ಸಮಸ್ತ ಸರ್ಕಾರಿ ನೌಕರರ ಮನವಿ ಮೂಲಕ ಕೋರಿದರು.

ಈ ಸಂಧರ್ಭದಲ್ಲಿ ಜಿಲ್ಲಾಧ್ಯಕ್ಷ ವಿರೇಶ್ ಎಸ್ ಒಡೇಯನಪುರ ಸೇರಿದಂತೆ ಸಮಿತಿಯ ಪದಾಧಿಕಾರಿಗಳು, ಸದಸ್ಯರು, ಶಿಕ್ಷಕರು ಹಾಗೂ ಸಿಬ್ಬಂದಿಗಳು ಇದ್ದರು.

## ಪ್ರತಿ ಎಕರೆಗೆ 50 ಸಾವಿರ ರೂ. ಪರಿಹಾರ ನೀಡಲು ಆಗ್ರಹ ಜಂಟಿ ಸಮೀಕ್ಷೆ ಹೆಸರಲ್ಲಿ ವಿಳಂಬ ಬೇಡ: ಸಂಗಮೇಶ ಸಗರ

**ವರದಿ : ಲಾಲಸಾಬ ಸವಾರಗೋಳ.**

**ತಾಳಿಕೋಟೆ :** ಕಳೆದ ತಿಂಗಳಾಂತ್ಯದಿಂದ ತಾಳಿಕೋಟೆ ತಾಲೂಕಿನಲ್ಲಿವರುಣನಆರ್ಭಟಕ್ಕೆ ತೊಗರಿ, ಹತ್ತಿ, ಅಲ್ಲದೇ ಇನ್ನಿತರ ಎಲ್ಲ ಬೆಳೆಗಳು ನೀರಿನಲ್ಲಿ ನಿಂತು ಸಂಪೂರ್ಣ ನಾಶವಾಗಿ ಹೋಗಿವೆ ಹತ್ತಿ ಬೆಳೆಯು ತಾಮ್ರ ರೋಗಕ್ಕೆ ತುತ್ತಾಗಿ ಕಾಯಿ ಒಡೆಯುವದೇ ನಿಂತು ನಾಶವಾಗಿ ಹೋಗಿದೆ ಈ ಬೆಳೆ ಹಾನಿಯ ಬಗ್ಗೆ ಜಂಟಿ ಸಮೀಕ್ಷೆ ನೆಪ ಹೇರುವದು ಸರಿಯಲ್ಲಾ. ಕೂಡಲೇ ಪ್ರತಿ ಎಕರೆಗೆ 50 ಸಾವಿರ ರೂ. ಸರ್ಕಾರವು ಪರಿಹಾರ ಘೋಷಿಸಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಸಂಘಟನೆಯ ಜಿಲ್ಲಾ ಅಧ್ಯಕ್ಷ ಸಂಗಮೇಶ ಸಗರ ಅವರು ಒತ್ತಾಯಿಸಿದರು.

ಶುಕ್ರವಾರರಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ತಹಶಿಲ್ದಾರರ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿ ಮಾತನಾಡುತ್ತಿದ್ದ ಅವರು ಜಂಟಿ ಸಮೀಕ್ಷೆ ನೆಪದಲ್ಲಿ ಯಾವುದೇ ಸಮಯವನ್ನು ಹಾಳು ಮಾಡದೆ ತಾಲೂಕಿನ ಪ್ರತಿಯೊಂದು ಗ್ರಾಮದ ಪ್ರತಿಯೊಬ್ಬ ರೈತರಿಗೂ ಒಣ ಬೇಸಾಯಕ್ಕೆ 50 ಸಾವಿರ ರೂ. ಹಾಗೂ ನೀರಾವರಿ ಭೂಮಿಗೆ ಒಂದು ಲಕ್ಷ ರೂಪಾಯಿ ಹಾಗೆಯೆ ಬಹು ವಾರ್ಷಿಕ ಬೆಳೆಗಳಿಗೆ ಎರಡು ಲಕ್ಷ ರೂ. ಪರಿಹಾರವನ್ನು ಕೊಡಬೇಕೆಂದು ಈ ಮೂಲಕ ಜಿಲ್ಲಾಡಳಿತಕ್ಕೆ ಹಾಗೂ ರಾಜ್ಯ ಸರ್ಕಾರಕ್ಕೆ ಒತ್ತಾಯ ಮಾಡುತ್ತಿದ್ದೇವೆ ಎಂದರು.

ವಿಪರೀತ ಮಳೆಯಿಂದಾಗಿ ತಾಲೂಕಿನ ಕೃಷಿ ಬೆಳೆಗಳಾದ ತೊಗರಿ ಹತ್ತಿ ಮೆಕ್ಕೆಜೋಳ ಸಜ್ಜಿ ಸೇರಿದಂತೆ ಸಮಸ್ತ ಬೆಳೆಗಳು ಹಾಳಾಗಿವೆ ದ್ರಾಕ್ಷಿ ದಾಳಿಂಬ್ರಿ ಲಿಂಬೆ, ಬಾಳೆ ಸೇರಿದಂತೆ ಎಲ್ಲ ಬೆಳೆಗಳಲ್ಲಿ ನೀರು ನಿಂತು ಹಾಳಾಗಿವೆ ಆದ್ದ-ರಿಂದ ಯಾವುದೇ ಜಂಟಿ ಸಮೀಕ್ಷೆ ವೈಮಾನಿಕ ಸಮೀಕ್ಷೆ ಎಂದು ನೆಪ ಹೇಳದೆ15ದಿನದಒಳಗಾಗಿಜಿಲ್ಲೆಯ ಎಲ್ಲರಿಗೂ ಪರಿಹಾರ ಬಿಡುಗಡೆ ಮಾಡಬೇಕೆಂದು ಒತ್ತಾಯಿಸಿದ ಅವರು ಸಮಸ್ತ ಬೆಳೆಗಳು ಕೂಡ ನಷ್ಟಗೊಂಡಿರುವ ಹಿನ್ನೆಲೆಯಲ್ಲಿ ಯಾರಿಗೂ ತಾರತಮ್ಯ ಮಾಡದೆ ಎಲ್ಲರಿಗೂ ನಷ್ಟ ಪರಿಹಾರವನ್ನು ಹಾಕಬೇಕು ಅದೇ ರೀತಿಯಾಗಿ ಫಸಲು ಭೀಮಾ ಯೋಜನೆಯ ವಿಮೇವೂ ಕೂಡ ಆದಷ್ಟು ಬೇಗನೆ ಕೊಡಬೇಕೆಂದರು.

ತಾಲೂಕ ಅಧ್ಯಕ್ಷರಾದ ಶ್ರೀಶೈಲ ವಾಲಿಕಾರ ಅವರು ಮಾತನಾಡಿ ಭೀಮೆ, ಕೃಷ್ಣಾ ಹಾಗೂ ಡೋಣಿ ನದಿಯ ಪ್ರವಾಹದಿಂದಾಗಿ ಸಾಕಷ್ಟು ರೈತರ ಕೃಷಿ ಭೂಮಿಗಳ ಬೆಳೆಗಳು ಹಾಳಾಗಿರುವ ಜೊತೆಗೆ ಮನೆ ಮಠಗಳು ಕೂಡ ಬಿದ್ದು ಹಲವಾರು ಪ್ರಾಣಿಗಳು ಕೂಡ ನೀರಿನಲ್ಲಿ ಕೊಚ್ಚಿಕೊಂಡು ಹೋಗಿವೆ ಇದಕೆಲ್ಲ ಪರಿಹಾರ ನೀಡಬೇಕೆಂದು ಆಗ್ರಹ ಮಾಡುತ್ತಿದ್ದೇವೆ ಒಂದು ವೇಳೆ ತಡವಾದರೆ ಉಗ್ರ ಹೋರಾಟ ಮಾಡಲಾಗುವುದು ಎಂದರು.

ಮಹಿಳಾ ಘಟಕದ ತಾಲೂಕಾ ಅಧ್ಯಕ್ಷರಾದ ಸುಜಾತಾ ಅವಟಿ ಅವರು ಮಾತನಾಡುತ್ತ ನೆಪ ಮಾತ್ರಕ್ಕೆ ಸಮೀಕ್ಷೆ ಮಾಡಿ ಕಣ್ಣಿಗೆ ಕಾಣಬರುವ ಕೆಲವೇ ರೈತರಿಗೆ ನಷ್ಟ ಪರಿಹಾರ ಕೊಡುವುದಾಗಿ ವರದಿ ತಯಾರಿಸಿದ್ದೀರಿ ಆದರೆ ತಾಲೂಕಿನ ಎಲ್ಲಾ ಹಳ್ಳಿಯ ರೈತ-ರಿಗೆ ಮಳೆಯಿಂದ ನಷ್ಟವಾಗಿದೆ. ಅವರೆಲ್ಲರಿಗೂ ಮತ್ತೊಮೆ ಸಮೀಕ್ಷೆ ಮಾಡಿ ಅವರಿಗೂ ಪರಿಹಾರ ಕೊಡಿ ಎಂದರು.

ಮನವಿ ಸ್ವೀಕರಿಸಿ ಮಾತನಾಡಿದ ತಹಸೀಲ್ದಾರ್ ಅವರು ಈಗಾಗಲೇ ಮೊದಲೇ ಹಂತದ ಡೋಣಿ ನದಿಯಿಂದ ನಷ್ಟಗೊಂಡ ರೈತರಿಗೆ ಪರಿಹಾರಕ್ಕೆ ಗುರುತಿಸಲಾಗಿತ್ತು, ಮತ್ತೆ ಇತ್ತೀಚಿಗೆ ಹೆಚ್ಚಿನ ಮಳೆ ಉಂಟಾಗಿ ಅನೇಕ ರೈತರ ಜಮೀನುಗಳಲ್ಲಿ ನೀರು ನಿಂತು ನಷ್ಟಗೊಂಡಿರುವ ಕುರಿತು ಪ್ರಥ-ಮ ವರದಿಯನ್ನು ಆಯಾ ಗ್ರಾಮ ಪಂಚಾಯತ್ ಅಥವಾ ತಲಾಟಿ ಕಚೇರಿ ಮುಂದೆ ಅಂಟಿಸಲಾಗಿದೆ. ಇನ್ನು ಯಾವ್ ರೈತರು ನಷ್ಟಗೊಂಡವರು ಉಳಿದಿದ್ದರೆ ಅಂಥವರು ದಾಖಲೆಗಳನ್ನು ಕೊಡುವಂತೆ ತಿಳಿಸಿದರು.

ಈ ಸಮಯದಲ್ಲಿ ಬಾಗೇವಾಡಿ ತಾಲೂಕಾ ಅಧ್ಯಕ್ಷರಾದ ಮುದಕಣ್ಣ ಬಾಗೇವಾಡಿ, ನಿಂಗಣ್ಣ ಸುಣದಳ್ಳಿ, ಈರಯ್ಯ ಅಲಾಳಮಠ, ಶಿವಶಂಕ್ರಪ್ಪ ಸಜ್ಜನ್, ಲಿಂಗರಾಜ ಮೇಟಿ, ರಮೇಶಗೌಡ ವಡವಡಗಿ, ದೇವರೆಡ್ಡಿ ಬಿರಾದಾರ, ದೇವೀಂದ್ರಪ್ಪಗೌಡ್ ಪಾಟೀಲ್, ಮಹದೇಪ್ಪಾಗೌಡ ಜಲಪುರ್, ದೇವಿಡ್ರಪ್ಪಾಗೌಡ ಕೊನಾಳ, ಸಂಗನಗೌಡ ಬೆಂಡೆಗೊಂದಳ, ಈರಣ್ಣ ಸಿಂಪಿಗೆರೆ, ಮಡಿವಾಳಪ್ಪ ಸಿಂಪಿಗೆರೆ, ಶಿವಾಜಿ ಮೊಪಗಾರ, ಸಿದ್ದಪ್ಪತಳವಾರ್, ಅಪ್ಪಸಾಹೇಬ್ ಸಜ್ಜನ್, ಮುರ್ತುಜ ಹಳ್ಳದಮನಿ. ಮಲ್ಲು ಮುದನೂರ್, ಅಪ್ಪಯ್ಯ ಕಾರಕಳ್ಳಿಮಠ. ಶಿವಶಂಕರಪ್ಪ ಟಕಳಕ್ಕಿ, ಬಸವರಾಜ್ ನಾಟಿಕಾರ್, ಭೀಮಣ್ಣ ಸಜ್ಜನ, ಬೋರಮ್ಮ ಕುಂಬಾರ, ಸುಧಾ ಮಡ್ಡಿ, ದ್ರಾಕ್ಷಯಿಣಿ ಲಿಂಗದಳ್ಳಿ, ರೇಣುಕಾ ಹಂಚಾಟೆ, ಲಕ್ಷ್ಮೀಬಾಯಿ ಸಜ್ಜನ ಸೇರಿದಂತೆ ನೂರಾರು, ರೈತರು ಭಾಗವಹಿಸಿದ್ದರು.

## ವರದಕ್ಷಿಣೆ ಕಿರುಕುಳ: ಮಹಿಳೆ ದೂರು

**ಕಲಬುರಗಿ:** ತವರು ಮನೆಯಿಂದ ಇನ್ನೂ ಹೆಚ್ಚಿನ ವರದಕ್ಷಿಣೆ ತರುವಂತೆ ಗಂಡ ಮತ್ತು ಆತನ ಮನೆಯವರು ಕಿರುಕುಳ ನೀಡಿದ ಬಗ್ಗೆ ಮಹಿಳೆಯೊಬ್ಬರು ಇಲ್ಲಿನ ಮಹಿಳಾ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ.




ನಗರದ ಎಂಎಸ್‌ಕೆಮಿಲ್ ಏರಿಯಾದ ಆರೀಫ್ ಕಾಲೋನಿಯ ನಸರೀನ್ ಬೇಗಂ ಎಂಬುವವರೆ ಪತಿ ಸಿರಾಜ್ ಹಜಾರೆ ಮತ್ತು ಅವರ ಮನೆಯವರ ವಿರುದ್ಧ ದೂರು ಸಲ್ಲಿಸಿದ್ದಾರೆ.

ಮದುವೆ ಸಂದರ್ಭದಲ್ಲಿ 2.5 ತೊಲೆ ಬಂಗಾರ, 1 ಲಕ್ಷ ರೂ.ನಗದು, ಬೆಲೆಬಾಳುವ ಬಟ್ಟೆ ಬರೆ, ಗೃಹ ಬಳಕೆಯ ಸಾಮಾನುಗಳನ್ನು ಕೊಟ್ಟಿದ್ದು, ತವರು ಮನೆಯಿಂದ ಇನ್ನೂ 3 ಲಕ್ಷ ರೂ.ವರದಕ್ಷಿಣೆ ತರುವಂತೆ ಕಿರುಕುಳ ನೀಡುತ್ತಿದ್ದಾರೆ ಎಂದು ಅವರು ದೂರಿನಲ್ಲಿ ತಿಳಿಸಿದ್ದಾರೆ. ಮಹಿಳಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

**"SIHI KAHI"** Kannada Daily Morning, Editor, Owner, Publisher, Printer by **MARUTI BASAVANTAPPA HOASAMANI** Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at **SUDIN PRINTERS**, Sector No. 33, Shop No. 38 & 40, Opp. Ambedkar Bhavan, **NAVANAGAR, BAGALKOT-587 101.** Dist : Bagalkot, Karnataka State